ಸಂಪುಟ : 9 ಸಂಚಿಕೆ 112 ಪುಟ : 4 ಬೆಲೆ: 3.00 ಬುಧವಾರ 5-6-2024 ಜೂನ್ Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 112 Pages : 4 Price : 3.00 Wednesday June 5 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಲಕ್ಷ್ಮೇಶ್ವರದ ತಮ್ಮ ನಿವಾಸದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಪ್ರತಿಕ್ರಿಯೆ

## ಜನರ ಧ್ವನಿಯಾಗಿರುವೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ಪರಾಜಯಗೊಂಡಿದ್ದರಿಂದ ಯಾವುದೇ ರೀತಿಯಲ್ಲಿ ಎದೆಗುಂದುವದಿಲ್ಲ. ಮುಂದಿನ ದಿನಗಳಲ್ಲಿ ಪಕ್ಷದ ಮುಖಂಡರ ಮಾರ್ಗದರ್ಶನದಲ್ಲಿ ಪಕ್ಷದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತೇನೆ ಮತ್ತು ಕ್ಷೇತ್ರದ ಜನರ ಧ್ವನಿಯಾಗಿರುತ್ತೇನೆ ಎಂದು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಮತ ಎಣಿಕೆ ಮುಕ್ತಾಯವಾದ ನಂತರ ಲಕ್ಷ್ಮೇಶ್ವರದ ಅವರ ನಿವಾಸಕ್ಕೆ ಆಗಮಿಸಿದ ಸಂದರ್ಭದಲ್ಲಿ ಪ್ರತಿಕ್ರಿಯಿಸಿದ ಅವರು, ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಲು ನನ್ನ ಮೇಲೆ ವಿಶ್ವಾಸವಿಟ್ಟು ಅವಕಾಶ ದೊರಕಿಸಿಕೊಟ್ಟಿರುವದಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನೀಯಾ ಗಾಂಧಿ, ರಾಹುಲ್ ಗಾಂಧಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ಸೇರಿದಂತೆ ರಾಜ್ಯದ ಎಲ್ಲ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ.

ಕಳೆದ 2-3 ತಿಂಗಳಿಂದ ಕ್ಷೇತ್ರದಲ್ಲಿನ ಎಲ್ಲ ಶಾಸಕರು, ಮಾಜಿ ಶಾಸಕರು, ಮುಖಂಡರು, ಕಾರ್ಯಕರ್ತರು ನನ್ನ ಗೆಲುವಿಗಾಗಿ ಹಗಲಿರುವುದು ಶ್ರಮಿಸಿದ್ದಾರೆ. ಗೆಲ್ಲುವಲ್ಲಿ ವಿಫಲವಾಗಿದ್ದರೂ ಸಹ ಕ್ಷೇತ್ರದ ಜನತೆಯ ಮನ ಗೆಲ್ಲುವಲ್ಲಿ ಯಶಸ್ವಿಯಾಗಿದ್ದೇವೆ. ಕೆಲವು ತಾಲೂಕುಗಳಲ್ಲಿ ನನಗೆ ನಿರೀಕ್ಷೆಗಿಂತಲೂ ಹೆಚ್ಚು ಮತ ಬಂದಿದ್ದರೆ ನೀರೀಕ್ಷಿಸಿದ ಕ್ಷೇತ್ರಗಳಲ್ಲಿ ಕಡಿಮೆ ಮತಗಳು ಬಂದಿದ್ದರೂ ಎಲ್ಲವನ್ನೂ ಪ್ರೀತಿಯಿಂದ ಸ್ವಾಗತಿಸುತ್ತೇನೆ.

ಸೋಲು-ಗೆಲುವು ಸಾಮಾನ್ಯ. ಇದನ್ನು ಸವಾಲಾಗಿ ಸ್ವೀಕರಿಸುವದರ ಜೊತೆಗೆ ಪಕ್ಷ ಸಂಘಟನೆಯಲ್ಲಿ ಮತ್ತಷ್ಟು ಉತ್ಸಾಹದಿಂದ ಕಾರ್ಯಕರ್ತರು, ಮುಖಂಡರೊಂದಿಗೆ ಕೆಲಸ ಮಾಡುತ್ತೇನೆ. ಹಾವೇರಿ ಕ್ಷೇತ್ರದ ಜನತೆ ನೀಡಿರುವ ಪ್ರೀತಿ ವಿಶ್ವಾಸವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ. ಮತದಾನ ಮಾಡಿದ ಎಲ್ಲರಿಗೂ ಕೃತಜ್ಞತೆ ಹೇಳಿದ ಅವರು, ವಿಜೇತ ಅಭ್ಯರ್ಥಿ ಬಸವರಾಜ ಬೊಮ್ಮಾಯಿಯವರಿಗೆ ಶುಭ ಹಾರೈಸುವದಾಗಿ ಹೇಳಿದರು.

## ಐಟಿಐ ಪ್ರವೇಶ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 9 ಸರ್ಕಾರಿ ಹಾಗೂ 7 ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಆಗಸ್ಟ್-2024ನೇ ಶೈಕ್ಷಣಿಕ ಸಾಲಿಗೆ ಮೆರಿಟ್-ಕಂ-ರಿಸರ್ವೇಷನ್ ಆಧಾರಿತ ಪ್ರವೇಶಗಳನ್ನು ಆನ್‌ಲೈನ್ ಮುಖಾಂತರ ವೃತ್ತಿಯ ಅನುಸಾರ ಎಸ್.ಎಸ್.ಎಲ್.ಸಿ ಉತ್ತೀರ್ಣ/ಅನುತ್ತೀರ್ಣರಾದ/8ನೇ ತರಗತಿ ಉತ್ತೀರ್ಣರಾದ ಅರ್ಹ ಆಸಕ್ತ ಅಭ್ಯರ್ಥಿಗಳು ಎನ್.ಸಿ.ವಿ.ಟಿ ಸಂಯೋಜಿತ ಸಿಟಿಎಸ್ ಯೋಜನೆ ಅಡಿಯಲ್ಲಿರುವ ಇಂಜಿನೀಯರಿಂಗ್ ಹಾಗೂ ನಾನ್ ಇಂಜಿನೀಯರಿಂಗ್ ವೃತ್ತಿಗಳಿಗೆ ರಾಜ್ಯದ ಯಾವುದೇ ಭಾಗದಿಂದ ಇಲಾಖೆಯ ವೆಬ್ ಸೈಟ್ www.cite.karnataka.gov.in ಮೂಲಕ ಸ್ವತಃ ಅಥವಾ ಐ.ಟಿ.ಐ ಗಳಲ್ಲಿರುವ ಹೆಲ್ಪ್ ಡೆಸ್ಕ್ ಮುಖಾಂತರ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಲು ಜೂನ್ 9 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಸರ್ಕಾರಿ ಮತ್ತು ಅನುದಾನಿತ ಐ.ಟಿ.ಐಗಳ ಪ್ರಾಚಾರ್ಯರನ್ನು ಅಥವಾ ಇಲಾಖೆಯ ವೆಬ್‌ಸೈಟ್‌ನ್ನು ಸಂಪರ್ಕಿಸಬಹುದಾಗಿದೆ ಎಂದು ಸರ್ಕಾರಿ ಐ.ಟಿ.ಐ ಗದಗ ಪ್ರಾಚಾರ್ಯ/ನೋಡಲ್ ಅಧಿಕಾರಿ ಡಾ. ಮಲ್ಲೂರ ಬಸವರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಾವೇರಿ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಗೆಲುವು

# ಮತ್ತೆ ಮುಗ್ಗರಿಸಿದ ಕೈ, ಅರಳಿದ ಕಮಲ

■ವಿಜಯಸಾಕ್ಷಿ ಸುದ್ದಿ, ಹಾವೇರಿ

18ನೇ ಲೋಕಸಭೆಯ ಸಾರ್ವತ್ರಿಕ ಚುನಾವಣೆಯಲ್ಲಿ ಹಾವೇರಿ ಕ್ಷೇತ್ರದಿಂದ ಸ್ಪರ್ಧಿಸಿದ್ದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರು 7,05,538 ಮತಗಳನ್ನು ಪಡೆಯುವ ಮೂಲಕ ತಮ್ಮ ಸಮೀಪದ ಪ್ರತಿಸ್ಪರ್ಧಿ, ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ವಿರುದ್ಧ 43,513 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.




ಆನಂದಸ್ವಾಮಿ ಗಡ್ಡದೇವರಮಠ (ಇಂಡಿಯನ್ ನ್ಯಾಷನಲ್ ಕಾಂಗ್ರೆಸ್) 6,62,025 ಮತಗಳು, ಖಾಜಾಮೋಹಿದ್ದೀನ್ ಗುಡಗೇರಿ (ಸೋಸಿಯಾಲಿಸ್ಟ್ ಪಾರ್ಟಿ(ಇಂಡಿಯಾ)) 3,401 ಮತಗಳು, ಗಂಗಾಧರ ಬಡಿಗೇರ (ಸೋಷಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ-ಕಮ್ಯುನಿಸ್ಟ್) 2,270 ಮತಗಳು, ತನು ಚಿಕ್ಕಣ್ಣ ಯಾದವ್ (ಕರ್ನಾಟಕ ರಾಷ್ಟ್ರ ಸಮಿತಿ) 636 ಮತಗಳು, ಹೆಚ್.ಕೆ. ನರಸಿಂಹಪ್ಪ (ಸಮಾಜವಾದಿ ಜನತಾ ಪಾರ್ಟಿ-ಕರ್ನಾಟಕ) 446 ಮತಗಳು, ಶ್ರೀಮತಿ ರಶೀದ ಬೇಗಂ (ಇಂಡಿಯನ್ ಮೂಮೆಂಟ್ ಪಾರ್ಟಿ) 397 ಮತಗಳು, ವಿಶ್ವನಾಥ ಶೀರಿ (ಏಕಂ ಸನಾತನ ಭಾರತ ದಳ) 401 ಮತಗಳು, ಪ್ರಜಾಕೀಯ ಸಚಿನಕುಮಾರ ಕರ್ಜೆಕಣ್ಣನವರ (ಉತ್ತಮ ಪ್ರಜಾಕೀಯ ಪಾರ್ಟಿ) 1,072 ಮತಗಳು, ಡಾ.ಗುರಪ್ಪ ಹೆಚ್. ಇಮ್ರಾಪೂರ(ಪಕ್ಷೇತರ) 953 ಮತಗಳು, ಜಗದೀಶ ಯಲ್ಲಪ್ಪ ಬಂಕಾಪೂರ (ಪಕ್ಷೇತರ) 674 ಮತಗಳು, ಬಸವರಾಜ ಹಾದಿ (ಪಕ್ಷೇತರ) 1,071 ಮತಗಳು, ರುದ್ರಪ್ಪ ಕುಂಬಾರ (ಪಕ್ಷೇತರ) 1,356 ಹಾಗೂ ಶ್ರೀಮತಿ ಸುನಂದಾ ಕರಿಯಪ್ಪ ಶಿರಹಟ್ಟಿ (ಪಕ್ಷೇತರ) ಅವರು 4,707 ಮತಗಳನ್ನು ಪಡೆದಿದ್ದಾರೆ ಹಾಗೂ ನೋಟಾಕ್ಕೆ 10,865 ಮತಗಳು ಚಲಾವಣೆಯಾಗಿವೆ.

ಅಂಚೆ ಮತದಾನದ ಅಭ್ಯರ್ಥಿವಾರು ವಿವರದಂತೆ ಆನಂದಸ್ವಾಮಿ ಗಡ್ಡದೇವರಮಠ (ಇಂಡಿಯನ್ ನ್ಯಾಷನಲ್ ಕಾಂಗ್ರೆಸ್) 1,834 ಮತಗಳು, ಬಸವರಾಜ ಬೊಮ್ಮಾಯಿ (ಭಾರತೀಯ ಜನತಾ ಪಾರ್ಟಿ)3,349 ಮತಗಳು, ಖಾಜಾಮೋಹಿದ್ದೀನ್ ಗುಡಗೇರಿ (ಸೋಸಿಯಾಲಿಸ್ಟ್ ಪಾರ್ಟಿ-ಇಂಡಿಯಾ) 3 ಮತಗಳು, ಗಂಗಾಧರ ಬಡಿಗೇರ(ಸೋಷಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್)) 06 ಮತಗಳು, ತನು ಚಿಕ್ಕಣ್ಣ ಯಾದವ್ (ಕರ್ನಾಟಕ ರಾಷ್ಟ್ರ ಸಮಿತಿ) 8 ಮತಗಳು, ಹೆಚ್.ಕೆ. ನರಸಿಂಹಪ್ಪ (ಸಮಾಜವಾದಿ ಜನತಾ ಪಾರ್ಟಿ -ಕರ್ನಾಟಕ)1, ಶ್ರೀಮತಿ ರಶೀದ ಬೇಗಂ, (ಇಂಡಿಯನ್ ಮೂಮೆಂಟ್ ಪಾರ್ಟಿ) 01, ಸಚಿನಕುಮಾರ ಕರ್ಜೆಕಣ್ಣನವರ (ಉತ್ತಮ ಪ್ರಜಾಕೀಯ ಪಾರ್ಟಿ) 14 ಮತಗಳು, ಡಾ.ಗುರಪ್ಪ ಹೆಚ್. ಇಮ್ರಾಪೂರ(ಪಕ್ಷೇತರ) 23 ಮತಗಳು, ಜಗದೀಶ ಯಲ್ಲಪ್ಪ ಬಂಕಾಪೂರ (ಪಕ್ಷೇತರ) 14 ಮತಗಳು, ಬಸವರಾಜ ಹಾದಿ (ಪಕ್ಷೇತರ) 06 ಮತಗಳು, ರುದ್ರಪ್ಪ ಕುಂಬಾರ (ಪಕ್ಷೇತರ) 04 ಮತಗಳು ಹಾಗೂ ಶ್ರೀಮತಿ ಸುನಂದಾ ಕರಿಯಪ್ಪ ಶಿರಹಟ್ಟಿ (ಪಕ್ಷೇತರ) ಅವರು 02 ಅಂಚೆ ಮತಗಳನ್ನು ಪಡೆದಿದ್ದಾರೆ.




### 686 ಮತ ತಿರಸ್ಕೃತ

ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಚಲಾವಣೆಗೊಂಡ ಅಂಚೆ ಮತದಾನದ ಪೈಕಿ 686 ಮತಗಳು ತಿರಸ್ಕೃತಗೊಂಡಿವೆ. ನೋಟಾಕ್ಕೆ ಮೂರನೇ ಸ್ಥಾನ ಲಭಿಸಿದೆ. ಪಕ್ಷೇತರ ಅಭ್ಯರ್ಥಿಗಳಿಗಿಂತ ನೋಟಾಕ್ಕೆ ಹೆಚ್ಚು ಮತದಾನವಾಗಿದೆ.

ಹಾವೇರಿ ಕ್ಷೇತ್ರದಲ್ಲಿ 5,985 ಅಂಚೆ ಮತದಾನ ಚಲಾವಣೆಗೊಂಡಿವೆ. ಈ ಪೈಕಿ 686 ಮತಗಳು ತಿರಸ್ಕೃತಗೊಂಡಿವೆ. 5,299 ಮತಗಳು ಸ್ವೀಕೃತವಾಗಿವೆ. 34 ಮತಗಳು ನೋಟಾಕ್ಕೆ ಚಲಾವಣೆಗೊಂಡಿವೆ.

### ಗೆಲುವು ಘೋಷಣೆಯ ನಂತರ ಮಾಧ್ಯಮದೊಂದಿಗೆ ಮಾತನಾಡಿದ ಸಂಸದ ಬಸವರಾಜ ಬೊಮ್ಮಾಯಿ

# ನರೇಂದ್ರ ಮೋದಿ ನೇತೃತ್ವದಲ್ಲಿ ಸರ್ಕಾರ ರಚನೆ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶದಲ್ಲಿ ಎನ್‌ಡಿಎ ಸರ್ಕಾರ ರಚನೆಯಾಗುವ ವಿಶ್ವಾಸ ಇದೆ ಎಂದು ಮಾಜಿ ಸಿಎಂ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಜಯ ಗಳಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುನ್ನಡೆ ನೋಡಿದಾಗ ನಿರೀಕ್ಷೆಗಿಂತ ಕಡಿಮೆಯಾಗಿದೆ. ಎನ್‌ಡಿಎಗೆ ಹೆಚ್ಚು ಸ್ಥಾನ ಸಿಗಲಿದೆ. ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಸರ್ಕಾರ ರಚನೆಯಾಗಲಿದೆ ಎಂದು ಹೇಳಿದರು.

ಕೆಲವು ರಾಜ್ಯದಲ್ಲಿ ನಿರೀಕ್ಷೆಗಿಂತ ಕಡಿಮೆ ಗೆಲುವು ಬಂದಿದ್ದನ್ನು ಒಪ್ಪಿಕೊಳ್ಳುತ್ತೇವೆ. ಹಿನ್ನಡೆಗೆ ಸ್ಥಳೀಯ ಕಾರಣಗಳು ಇರುತ್ತವೆ. ಅವುಗಳ ವಿಶ್ಲೇಷಣೆ ಮಾಡುತ್ತೇವೆ. ಕೊರತೆಗಳನ್ನು ಸರಿಪಡಿಸಿ ಮೋದಿಯವರ ನೇತೃತ್ವದಲ್ಲಿ ದೇಶ ಮುನ್ನಡೆಸುತ್ತೇವೆ ಎಂದರು.

ರಾಜ್ಯದಲ್ಲಿ ಕಲ್ಯಾಣ ಕರ್ನಾಟಕದಲ್ಲೂ ಹಿನ್ನಡೆಯಾಗಿದೆ. ಕರ್ನಾಟದಲ್ಲಿ ಇನ್ನೂ 4ರಿಂದ 5 ಸ್ಥಾನ ಬರಬೇಕಿತ್ತು. ಆದರೆ, ಅಲ್ಪ ಪ್ರಮಾಣದಲ್ಲಿ 3-4 ಸ್ಥಾನಗಳನ್ನು ಕಳೆದುಕೊಂಡಿದ್ದೇವೆ.

ಜನಾದೇಶವನ್ನು ಸ್ವೀಕರಿಸಿ, ಜನರ ನಂಬಿಕೆಗೆ ತಕ್ಕ ಹಾಗೆ ಕೆಲಸ ಮಾಡುತ್ತೇನೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

## ಜನತೆಯ ಆಶೀರ್ವಾದದಿಂದ ಗೆಲುವು

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಗದಗ ಕ್ಷೇತ್ರವನ್ನು ಮಾದರಿ ಕ್ಷೇತ್ರವಾಗಿ ಅಭಿವೃದ್ಧಿಪಡಿಸುತ್ತೇವೆ ಎಂದು ಕ್ಷೇತ್ರದ ನೂತನ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಲೋಕಸಭಾ ಚುನಾವಣೆಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದ ನಂತರ ಹಾವೇರಿಯಲ್ಲಿ ನಡೆದ ಬೃಹತ್ ಮೆರವಣಿಗೆಯಲ್ಲಿ ಪಾಲ್ಗೊಂಡು, ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು, ನನ್ನ ಗೆಲುವಿಗೆ ಕಾರಣರಾದ ಹಾವೇರಿ-ಗದಗ ಜಿಲ್ಲೆಗಳ ಜನರಿಗೆ ಕೋಟಿ ಕೋಟಿ ನಮನಗಳು. ಮಹಾಜನತೆಯ ಆಶೀರ್ವಾದದಿಂದ ಈ ಗೆಲುವು ಸಾಧಿಸಿದ್ದೇನೆ ಎಂದು ಹೇಳಿದರು.

ನನ್ನ ಮೇಲೆ ನಂಬಿಕೆ ಇಟ್ಟು ಟಿಕೆಟ್ ನೀಡಿದ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ತುಂಬು ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ಬೊಮ್ಮಾಯಿ ಹೇಳಿದರು.



ನೀವು ನನ್ನ ಮೇಲೆ, ಪಕ್ಷದ ಮೇಲೆ ಇಟ್ಟಿರುವ ನಂಬಿಕೆಗೆ ತಕ್ಕಹಾಗೆ ಕೆಲಸ ಮಾಡುತ್ತೇನೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿರಬಹುದು. ನಮ್ಮ ಬಳಿ ಜನ ಶಕ್ತಿ ಇದೆ. ಜನಶಕ್ತಿ-ರಾಜಶಕ್ತಿ ನಡುವೆ ಸಂಘರ್ಷ ಬಂದಾಗ ಜನಶಕ್ತಿ ಗೆಲ್ಲುತ್ತದೆ. ಅಧಿಕಾರಿಗಳು ಕಾನೂನು ಪ್ರಕಾರ ಕೆಲಸ ಮಾಡದಿದ್ದರೆ ಸುಮ್ಮನೆ ಬಿಡುವುದಿಲ್ಲ ನಮ್ಮ ಕಾರ್ಯಕರ್ತರಿಗೆ ವಿನಾಕಾರಣ ತೊದರೆ ಕೊಟ್ಟರೆ ಸುಮ್ಮನಿರುವುದಿಲ್ಲ ಎಂದು ಬಸವರಾಜ ಬೊಮ್ಮಾಯಿ ಎಚ್ಚರಿಕೆ ನೀಡಿದರು.

## ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ವಿಜಯೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹಾಗೂ ಬಾಗಲಕೋಟೆ ಬಿಜೆಪಿ ಅಭ್ಯರ್ಥಿ ಪಿ.ಸಿ. ಗದ್ದಿಗೌಡ್ರ ಅವರು ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಹುಬ್ಬಳ್ಳಿ ರಸ್ತೆಯಲ್ಲಿರುವ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ಸಿಹಿ ಹಂಚಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಕ್ಕಿರೇಶ ರಟ್ಟಿಹಳ್ಳಿ, ಲಿಂಗರಾಜ ಪಾಟೀಲ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಕೆ.ಕೆ. ಮಳಗೌಡ್ರ, ಜಗನ್ನಾಥಸಾ ಭಾಂಡಗೆ, ಬಿ.ಎಚ್. ಲದ್ವಾ, ತೊಟೊಸಾ ಭಾಂಡಗೆ, ಪ್ರಕಾಶ ಬಾಕಳೆ, ಶಶಿಧರ ದಿಂಡೂರ, ಡಿ.ಬಿ. ಕರಿಗೌಡ್ರ, ನಿರ್ಮಲಾ ಕೊಳ್ಳಿ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ಜಯಶ್ರೀ ಉಗಲಾಟದ, ರೇಖಾ ಬಂಗಾರಶೆಟ್ಟರ, ಚನ್ನಮ್ಮ ಹುಳಕಣ್ಣವರ, ಕಸ್ತೂರಿ ಕಮ್ಮಾರ, ಕಮಲಾಕ್ಷೀ ಗೊಂದಿ, ರೇಖಾ ಬೆಟಗೇರಿ, ರತ್ನಾ ಕುರಗೋಡ, ಉಮೇಶ ಹಡಪದ, ಮಂಜುನಾಥ ಶಾಂತಗೇರಿ, ಮಾಂತಾಶ ಬಾತಾಖಾನಿ, ಗೋರಪ್ಪಜ್ಜ, ಹನಮಂತ ದಿಂಡೆಣ್ಣವರ, ಕುಮಾರ ಮಾರನಬಸರಿ, ಸಿರಾಜ ಲಕ್ಕುಂಡಿ, ನಿಸಾರ ನಮಾಜಿ, ವಿನೋದ ಹಂಸನೂರ ಮುಂತಾದ ಪ್ರಮುಖರು ಉಪಸ್ಥಿತರಿದ್ದರು.

### ನಡೆಯದ ಕಾಂಗ್ರೆಸ್ ಗ್ಯಾರಂಟಿ ಬಲ । ಗದಗ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬೊಮ್ಮಾಯಿಗೆ 10509 ಮತಗಳ ಮುನ್ನಡೆ

# ‘ಕೈ’ಕೊಟ್ಟ ಗ್ಯಾರಂಟಿ : ಅರಳಿದ ಕಮಲ

■ವಿಜಯಸಾಕ್ಷಿ ಸುದ್ದಿ, ಗದಗ

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಹಾವೇರಿ-ಗದಗ ಮತಕ್ಷೇತ್ರ ಇಡೀ ರಾಜ್ಯದ ಚಿತ್ತ ಸೆಳೆದಿತ್ತು. ಒಂದೆಡೆ ರಾಜ್ಯದ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಮುಂದಿಟ್ಟುಕೊಂಡು ಕ್ಷೇತ್ರದಾದ್ಯಂತ ಪ್ರಚಾರ ಕೈಗೊಂಡು ಭರವಸೆ ಹುಟ್ಟಿಸಿದ್ದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಇನ್ನೊಂದೆಡೆ, ರಾಜ್ಯದ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ ಅನುಭವವುಳ್ಳ ಹಿರಿಯ ರಾಜಕಾರಣಿ ಬಸವರಾಜ ಬೊಮ್ಮಾಯಿ ನಡುವೆ ನೇರ ಸಮರ ಎಲ್ಲರಲ್ಲೂ ಕುತೂಹಲ ಮೂಡಿಸಿತ್ತು.



ಕಾಯುವಿಕೆಯ ತಪಸ್ಸು ಮುಗಿದು, ಜೂನ್ 4ರಂದು ನಡೆದ ಮತ ಎಣಿಕೆಯಲ್ಲಿ ಕಾಂಗ್ರೆಸ್‌ನ ಗ್ಯಾರಂಟಿ ನಿರೀಕ್ಷೆ ಹುಸಿಯಾಗಿದ್ದು, ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ 10509 ಮತಗಳ ಅಂತರದಿಂದ ಗೆಲುವಿನ ನಗೆ ಬೀರಿ ಹಾವೇರಿ-ಗದಗ ಕ್ಷೇತ್ರದಲ್ಲಿ ಕಮಲವನ್ನರಳಿಸಿದ್ದಾರೆ.

ಹಾವೇರಿ-ಗದಗ ಲೋಕಸಭೆ ಕ್ಷೇತ್ರ ವ್ಯಾಪ್ತಿಯ ಒಟ್ಟು 8 ವಿಧಾನಸಭಾ ಕ್ಷೇತ್ರಗಳಲ್ಲಿ 7 ಜನ ಕಾಂಗ್ರೆಸ್ ಶಾಸಕರಿದ್ದರೂ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಗೆಲುವು ಸಾಧಿಸಲು ವಿಫಲರಾಗಿರುವುದು, ಗದಗ ವಿಧಾನಸಭೆ ಕ್ಷೇತ್ರದಲ್ಲಿಯೇ 10 ಸಾವಿರ ಮತಗಳ ಹಿನ್ನಡೆ ಅನುಭವಿಸಿರುವುದು ಕ್ಷೇತ್ರಾದ್ಯಂತ ಚರ್ಚೆಗೆ ಗ್ರಾಸವೊದಗಿಸಿದೆ.

ಆನಂದಸ್ವಾಮಿ ತಮ್ಮ ತವರು ಕ್ಷೇತ್ರ ಶಿರಹಟ್ಟಿ ಮೀಸಲು ಕ್ಷೇತ್ರದಲ್ಲಿ ಬಿಜೆಪಿ ಶಾಸಕರಿದ್ದರೂ 6936 ಮತಗಳ ಮುನ್ನಡೆ ಕಾಯ್ದುಕೊಂಡಿದ್ದಾರೆ. ಅದೇ ರೀತಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಎಸ್. ಪಾಟೀಲರ ರೋಣ ಕ್ಷೇತ್ರದಲ್ಲಿ 3309 ಮತಗಳ ಲೀಡ್ ಪಡೆದುಕೊಂಡಿದ್ದಾರೆ.

▶▶ 3ನೇ ಪುಟಕ್ಕೆ

ಕಾಂಗ್ರೆಸ್ ಬಿಡುಗಡೆ ಮಾಡಿದ ಅಭ್ಯರ್ಥಿಗಳ ಮೊದಲ ಪಟ್ಟಿಯಲ್ಲೇ ಆನಂದಸ್ವಾಮಿ ಗಡ್ಡದೇವರಮಠ ಸ್ಥಾನ ಪಡೆದಿದ್ದರು. ಇದರ ಲಾಭ ಪಡೆದ ಆನಂದಸ್ವಾಮಿ, ಸಾಕಷ್ಟು ಮುಂಚಿತವಾಗಿಯೇ ಪ್ರಚಾರ ಪ್ರಾರಂಭಿಸಿದ್ದರು. ಕ್ಷೇತ್ರದ ಎಲ್ಲ ಗ್ರಾಮಗಳಿಗೂ ಭೇಟಿ ನೀಡಿ ಮತಯಾಚಿಸಿದ್ದರು. ಆದರೆ ಗದಗ ಜಿಲ್ಲೆಯ ಮೂರು ವಿಧಾನಸಭೆ ಕ್ಷೇತ್ರಗಳಿಗೆ ಹೋಲಿಕೆ ಮಾಡಿದರೆ, ಶಿರಹಟ್ಟಿ ಮತ್ತು ರೋಣ ಕ್ಷೇತ್ರದಲ್ಲಿ ಪ್ರಚಾರ ಮಾಡಿದಷ್ಟು ಗದಗ ಕ್ಷೇತ್ರಕ್ಕೆ ಆದ್ಯತೆ ಕೊಡದಿರುವುದರಿಂದ ಈಗ ಹಾನಿ ಅನುಭವಿಸಬೇಕಾಯಿತು ಎಂಬ ಮಾತುಗಳು ಕೇಳಿಬರತೊಡಗಿವೆ.



## ಸಂಪಾದಕೀಯ

# ಅಬ್ ಕಿ ಬಾರ್ ದೋಸ್ತಿ ಸರ್ಕಾರ್

18ನೇ ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟವಾಗಿದ್ದು ಈ ಬಾರಿ ಅಚ್ಚರಿಯ ಜನಾದೇಶ ವ್ಯಕ್ತವಾಗಿದೆ. ಚುನಾವಣೆ ಪೂರ್ವ ಸಮೀಕ್ಷೆಗಳು ಮತ್ತು ಎಕ್ಸಿಟ್ ಪೋಲ್ ಸಮೀಕ್ಷೆಗಳ ಲೆಕ್ಕಾಚಾರವನ್ನು ಸಂಪೂರ್ಣ ಬುಡಮೇಲು ಆಗುವಂತಹ ಫಲಿತಾಂಶ ಹೊರ ಬಿದ್ದಿದೆ.

ಒಟ್ಟಾರೆ ಫಲಿತಾಂಶವನ್ನ ಗಮನಿಸಿದರೆ ಅಬ್ ಕಿ ಬಾರ್ ದೋಸ್ತಿ ಸರ್ಕಾರ್. ಅಂದರೆ ಕೇಂದ್ರದಲ್ಲಿ ಈ ಬಾರಿ ಮೈತ್ರಿ ಸರ್ಕಾರವೇ ಅಧಿಕಾರಕ್ಕೆ ಬರಲಿದೆ. ಅಬ್ ಕಿ ಬಾರ್ ಚಾರ್ ಸೌ ಪಾರ್ ಎನ್ನುತ್ತಿದ್ದ ಬಿಜೆಪಿ, 300ರ ಗಡಿ ದಾಟುವಲ್ಲಿ ವಿಫಲವಾಗಿದೆ. ಇನ್ನು ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬರುತ್ತೇವೆ ಎನ್ನುತ್ತಿದ್ದ ಇಂಡಿಯಾ ಮೈತ್ರಿಕೂಟಕ್ಕೂ ಸದ್ಯಕ್ಕೆ ಬಹುಮತ ಬಂದಿಲ್ಲ. ಆದರೆ ಒಂದು ಪ್ರಬಲ ಪ್ರತಿಪಕ್ಷವಾಗಿ ಸಂಸತ್ತಿನಲ್ಲಿ ಆತ್ಮವಿಶ್ವಾಸದಿಂದ ಕೂಡುವ ಅರ್ಹತೆಯನ್ನು ಪಡೆದುಕೊಂಡಿದೆ.

ಫಲಿತಾಂಶ ಹೊರಬೀಳುತ್ತಿದ್ದಂತೆಯೇ ಎರಡು ಪಕ್ಷಗಳಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯುವ ಲೆಕ್ಕಾಚಾರ ಶುರುವಾಗಿದೆ. ಮೈತ್ರಿ ಪಕ್ಷಗಳ ಮುಖಂಡರನ್ನ ಸಂಪರ್ಕಿಸುವ, ಅವರನ್ನ ಸೆಳೆಯುವ ತಂತ್ರಗಾರಿಕೆ ಶುರುವಾಗಿದೆ. ಸದ್ಯದ ಮಟ್ಟಿಗೆ ಅದು ಅನಿವಾರ್ಯ ಮತ್ತು ಸಹಜವೂ ಕೂಡ ಹೌದು.

ಆದರೆ ಈ ಜನಾದೇಶವನ್ನು ಗಮನಿಸಿದರೆ ಈ ಬಾರಿ ಸರ್ವಾಧಿಕಾರಿ ಮನೋಭಾವಕ್ಕೆ ಪೆಟ್ಟು ನೀಡಿರುವದಂತು ನಿಜ. ಪ್ರಜಾಪ್ರಭುತ್ವ ವ್ಯವಸ್ಥೆ ಗಟ್ಟಿಗೊಳಿಸುವಂತಹ ಫಲಿತಾಂಶ ಬಂದಿದೆ. ಯಾವುದೇ ಪಕ್ಷಕ್ಕೆ ಸ್ಪಷ್ಟ ಬಹುಮತ ಇರದಿದ್ದರೂ, ದೇಶದ ಪ್ರತಿಯೊಬ್ಬ ಮತದಾರ ತನ್ನಿಷ್ಟದ ಅಭ್ಯರ್ಥಿಗೆ ಮತ ಹಾಕಿ, ತನ್ನ ನಿರ್ಣಯವನ್ನು ದಾಖಲಿಸಿದ್ದಾನೆ.

ಅಧಿಕಾರದ ಬಲದಿಂದ ಮಾಧ್ಯಮ ವಲಯವನ್ನು ನಿಯಂತ್ರಿಸುವ ಪ್ರಯತ್ನಗಳ ಮಧ್ಯೆಯೂ ಮತದಾರರು ಪ್ರಬುದ್ಧತೆ ಪ್ರದರ್ಶಿಸಿದ್ದಾರೆ. ಭಾವನಾತ್ಮಕ ವಿಷಯಗಳ ಮೇಲೆ ನಡೆಯುತ್ತಿದ್ದ ಚುನಾವಣೆಗೆ ಮತದಾರರು ಇತಿಶ್ರೀ ಹಾಡಿದ್ದಾರೆ. ಒಟ್ಟಾರೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನಶಕ್ತಿಯ ಮುಂದೆ ಯಾವುದೂ ನಡೆಯುವುದಿಲ್ಲ ಎನ್ನುವುದಕ್ಕೆ 18ನೇ ಲೋಕಸಭೆ ಚುನಾವಣೆಯೇ ಸಾಕ್ಷಿಯಾಗಿದೆ.

## ವಿಶ್ವ ಪರಿಸರ ದಿನದ ನಿಮಿತ್ತ ಲೇಖನ

# ಹಸಿರು ಭವಿಷ್ಯಕ್ಕಾಗಿ ಪಯಣ

ಪ್ರತಿ ವರ್ಷ ಜೂನ್ 5ರಂದು 'ವಿಶ್ವ ಪರಿಸರ ದಿನ'ವನ್ನು ಆಚರಿಸಲಾಗುತ್ತದೆ. ವಿಶ್ವಾದ್ಯಂತ ಪರಿಸರದ ಬಗ್ಗೆ ಜಾಗೃತಿ ಮತ್ತು ನಮ್ಮ ಪರಿಸರದ ರಕ್ಷಣೆಗೆ ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಜೀವಿಗಳ ಪೋಷಣೆಯಲ್ಲಿ ಪರಿಸರ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಪರಿಸರದ ಸಮೃದ್ಧಿ ಆರೋಗ್ಯಕರ ಜೀವನ ಮತ್ತು ಭೂಮಿಯ ಮೇಲಿನ ಪ್ರತಿಯೊಂದು ಜೀವಿಯ ಜೀವನದ ಅಸ್ತಿತ್ವಕ್ಕೆ ಕಾರಣವಾಗಿದೆ. ಮಾನವ ಸೇರಿದಂತೆ ಇತರೆ ಪ್ರಾಣಿ–ಪಕ್ಷಿಗಳು, ಪ್ರತಿಯೊಂದು ಜೀವ ಸಂಕುಲ ಆಹಾರ, ಗಾಳಿ, ನೀರು ಇತರೆ ಅಗತ್ಯತೆಗಳಿಗಾಗಿ ಪರಿಸರವನ್ನ ಅವಲಂಬಿಸಿದೆ. ಇದರೆ ಇತ್ತೀಚಿನ ದಿನಗಳಲ್ಲಿ ಮಾನವ ಆಧುನಿಕ ಬದುಕಿನ ಗೀಳಿಗೆ ಬಿದ್ದು ಪರಿಸರವನ್ನು ನಾಶ ಮಾಡುತ್ತಿದ್ದಾನೆ. ಈಗ ಮಾನವನ ಈ ದುರಾಸೆಯಿಂದ ಗಾಳಿ, ನೀರು, ಮಣ್ಣು ಮುಂತಾದ ಪರಿಸರದ ಪ್ರತಿಯೊಂದು ಅಂಶವೂ ಕಲುಷಿತಗೊಂಡಿದೆ. ಮನುಷ್ಯ ತನ್ನ ಅಭಿವೃದ್ಧಿಗಾಗಿ ತನಗೆ ಅರಿವಿಲ್ಲದಂತೆ ಪರಿಸರವನ್ನು ಹಾಳು ಮಾಡುತ್ತಿದ್ದಾನೆ. ಪ್ರತಿ ವರ್ಷ ವಿಶ್ವ ಪರಿಸರ ದಿನ ಬರುತ್ತಿದ್ದಂತೆಯೇ ಪರಿಸರ ಸಂರಕ್ಷಣೆಗಾಗಿ ಕಠಿಣ ಕಾನೂನು ರಚನೆಯಾಗಬೇಕೆಂಬ ಕೂಗು ಕೇಳಿಬರುತ್ತದೆ. ಜತೆ–ಗೆ ನಿಯಮಾವಳಿಗಳ ಕುರಿತು ಚರ್ಚೆಯಾಗುತ್ತದೆ. ಕಾನೂನುಗಳು ಮಹತ್ವಪೂರ್ಣವೇ ಆದರೂ ಪರಿಸರದ



ಸುಸ್ಥಿರತೆ ಖಾತ್ರಿಗೆ ಅವು ಮಾತ್ರವೇ ಸಾಕಾಗುವುದಿಲ್ಲ. ನಾವೂ ಪರಿಸರವನ್ನು ನಮ್ಮ ವ್ಯವಸ್ಥೆಯ ಭಾಗವನ್ನಾಗಿ ಮಾಡುವ ಅಗತ್ಯವಿದೆ. ಇಂದಿನ ದಿನದಲ್ಲಿನ ಕ್ಷಿಪ್ರ ಪ್ರಗತಿಯ ತಂತ್ರಜ್ಞಾನ ಮತ್ತು ವಿಜ್ಞಾನದ ಬೆಳವಣಿಗೆಗೆ ಅವಕಾಶ ನೀಡುವುದರ ಜತೆಗೆ ಪರಿಸರ ಜತೆಗಿನ ಸಾಮರಸ್ಯವನ್ನು ಕಾಪಾಡುವುದು ಸವಾಲಾಗಿ ಪರಿಣಮಿಸಿದೆ.


ವಾಸ್ತವವಾಗಿ ಮನುಷ್ಯನ ಅತಿಯಾಸೆಯೇ ಮಾಲಿನ್ಯದ ಮೂಲ. ಒಂದಷ್ಟು ವರ್ಷ ಹಿಂದೆ ಸಾಗಿ ಯೋಚಿಸಿ. ಆಗ ಪರಿಸರ ಹೇಗಿತ್ತು? ಎಷ್ಟ ಮರಗಳಿದ್ದವು? ಎಷ್ಟು ಮಳೆ ಬರುತ್ತಿತ್ತು? ಗರಿಷ್ಟ ತಾಪಮಾನ ಎಷ್ಟಿತ್ತು? ಎಷ್ಟು ವಾಹನಗಳು ಓಡಾಡುತ್ತಿದ್ದವು? ಎಂದು ಚಿಂತಿಸಿ. ಹೇಗೆ ಪರಿಸರ ನಾಶಕ್ಕೆ ಮನುಷ್ಯನೇ ಮೂಲ ಕಾರಣವಾಗುತ್ತಿದ್ದಾನೆ ಎನ್ನುವುದು ಅರ್ಥವಾಗುತ್ತದೆ. ಈಗ ಮರಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದೆ, ಮಳೆ ಸರಿಯಾಗಿ ಬರುತ್ತಿಲ್ಲ, ಬಂದರೂ ಅಕಾಲಿಕ. ತಾಪಮಾನ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ.

ಕೈಗಾರಿಕೀಕರಣದ ಹೆಸರಲ್ಲಿ, ಅಭಿವೃದ್ಧಿಯ ನೆಪದಲ್ಲಿ ಮರಗಿಡಗಳನ್ನು ಕಡಿದು, ನೆಲ, ಹೊಲ, ಜಲಗಳನ್ನು ಕಲುಷಿತಗೊಳಿಸಿ, ಸಸ್ಯರಾಶಿಯನ್ನು ಬಲಿತೆಗೆದು ಕಾಂಕ್ರೀಟ್ ನಾಡು ಮಾಡುವ ಹುನ್ನಾರದಿಂದ ನಾವು ಬದುಕುವ ನೈತಿಕ ಹಕ್ಕನ್ನೇ ಕಳೆದುಕೊಂಡಿದ್ದೇವೆ ಎಂದರೂ ತಪ್ಪಲ್ಲ. ಭೂಮಿ ತಾಯಿಯ ಮೇಲೆ ಅವಿರತವಾಗಿ ದೌರ್ಜನ್ಯ ನಡೆಯುತ್ತಲೇ ಇದೆ. ಇದರಿಂದಾಗಿ ಯಾಂತ್ರೀಕೃತ ಬದುಕಿನಲ್ಲಿ ಜನರು ಉಸಿರಾಡಲೂ ಕಷ್ಟವಾಗುವ ಪರಿಸ್ಥಿತಿ ಬಂದೊದಗಿದೆ.

ಮನುಷ್ಯ ತನ್ನ ದುರಾಸೆ ತ್ಯಜಿಸಿ, ಕ್ಷಣಿಕ ಸುಖದ ಆಸೆಗೆ ತಿಲಾಂಜಲಿ ಇಟ್ಟು, ತಾನು ಬದುಕುವ ನೆಲ–ಜಲಕ್ಕೆ ಗೌರವ ನೀಡಿದಲ್ಲಿ ಮಾತ್ರ ಮುಂದಿನ ಜನಾಂಗಕ್ಕೂ ಬದುಕಲು ಎಡೆಯಾಗಬಹುದು.

ಪ್ರಕೃತಿ ಕಸದ ತೊಟ್ಟಿಯಲ್ಲ ಎಂಬುದನ್ನು ಪ್ರತಿಯೊಬ್ಬರೂ ಅರ್ಥ ಮಾಡಿಕೊಳ್ಳಬೇಕು. ವಿಪರ್ಯಾಸವೆಂದರೆ, ನಮ್ಮ ಜನರ ಪರಿಸರ ಕಾಳಜಿ ಯಾರೋ ಒಬ್ಬ ಫೇಸ್‌ಬುಕ್‌ನಲ್ಲಿ ಗಿಡನೆಟ್ಟ ಚಿತ್ರ ಬಂದಲ್ಲಿ ಲೈಕ್ ಮಾಡುವುದಕ್ಕೆ ಮಾತ್ರ ಸೀಮಿತವಾಗಿಬಿಟ್ಟಿದೆ. ಆಧುನಿಕ ಜೀವನ ಶೈಲಿಯ ಅವಶ್ಯಕತೆಗಳನ್ನು ಪೂರೈಸಲು ಪೂರಕವಾಗಿ ಬೆಳೆಯುತ್ತಿರುವ ಆಧುನಿಕರಣ, ವ್ಯಾಪಾರೀಕರಣ, ಕೈಗಾರಿಕೀಕರಣ, ಗಣಿಗಾರಿಕೆ ಇತ್ಯಾದಿಗಳಿಂದ ಪರಿಸರ ಕಂಗಾಲಾಗಿದೆ. ಪರಿಸರದ ಅವನತಿಯು ತಂತ್ರಜ್ಞಾನ ಮತ್ತು ಅಭಿವೃದ್ಧಿಯ ಅನಿವಾರ್ಯ ಉಪ–ಉತ್ಪನ್ನವಾಗಬೇಕಾದ ಅನಿವಾರ್ಯತೆಯೇನೂ ಇಲ್ಲ. ತಂತ್ರಜ್ಞಾನ ಮತ್ತು ವಿಜ್ಞಾನ ಅಪಾಯಗಳನ್ನು ತಂದೊಡ್ಡುವುದಿಲ್ಲ, ಆದರೆ ತಂತ್ರಜ್ಞಾನ ಮತ್ತು ವೈಜ್ಞಾನಿಕ ಪ್ರಕ್ರಿಯೆಯ ವೇಳೆಯಲ್ಲಿ ಉತ್ಪಾದನೆಯಾಗುವ ತ್ಯಾಜ್ಯವಸ್ತು ಅಪಾಯವನ್ನು ಸೃಷ್ಟಿಸುತ್ತದೆ. ಆದ್ದರಿಂದ ತ್ಯಾಜ್ಯ ಬಳಕೆಯ ವಿಧಾನಗಳನ್ನು ಕಂಡು ಹಿಡಿಯುವ ಮತ್ತು ಮಾಲಿನ್ಯವಾಗದಂತಹ ಸೌರ ಇಂಧನದ ಬಳಕೆ ಅಥವಾ ನೈಸರ್ಗಿಕ ಕೃಷಿಯಂತಹ ಕಾರ್ಯ ವಿಧಾನಗಳನ್ನು ನಾವು ಬಳಸುವ ಅಗತ್ಯ ಇದೆ. ವಸ್ತುಗಳ ಪುನರ್ ಬಳಕೆ ಮಾಡುವ ವಿಧಾನವನ್ನು ಜನರಿಗೆ ತಿಳಿಸುವಂಥ ಕಾರ್ಯ ಅಗತ್ಯವಾಗಿದೆ. ಆ ಮೂಲಕ ಪರಿಸರ ನಾಶಕ್ಕೆ ಕಾರಣವಾದ ಇ–ತ್ಯಾಜ್ಯ ಮತ್ತು ಪ್ಲಾಸ್ಟಿಕ್ ಮಾಲಿನ್ಯವನ್ನು ತಡೆಹಿಡಿಯಲು ಸಾಧ್ಯ. ಈ ನಿಟ್ಟಿನಲ್ಲಿ ಸರಕಾರ, ಸರಕಾರೇತರ ಸಂಸ್ಥೆಗಳು ಒಂದಿಷ್ಟು ಪ್ರಯತ್ನಗಳನ್ನು ಮಾಡುತ್ತಿದ್ದರೂ ಪ್ಲಾಸ್ಟಿಕ್ ಬಳಕೆಯ ಪ್ರಮಾಣದ ಎದುರು ಇದು ಏನೇನೂ ಸಾಲದು. ಬರೀ ಗಿಡ ನೆಡುವುದಷ್ಟೇ ಪರಿಸರ ದಿನಾಚರಣೆಯಲ್ಲ. ವಾಯುಮಾಲಿನ್ಯ ಮತ್ತು ಜಲಮಾಲಿನ್ಯ ತಡೆಗಟ್ಟಲು ಅರಣ್ಯ ಸಂಪತ್ತಿನ ಯೋಗ್ಯ ನಿರ್ವಹಣೆ ಅತೀ ಅವಶ್ಯಕ.

ವಿಶ್ವಪರಿಸರ ದಿನಾಚರಣೆಯು ಅರ್ಥಪೂರ್ಣವಾಗಬೇಕಾದರೆ ಸರಕಾರದ ಜೊತೆಗೇ ಸರಕಾರೇತರ ಸಂಘ–ಸಂಸ್ಥೆಗಳ ಮುಖಾಂತರ ಪರಿಸರ ವಿಜ್ಞಾನಿಗಳು, ಪರಿಸರ ಸಂರಕ್ಷಣಾ ಕಾರ್ಯಕರ್ತರು, ಪರಿಸರ ವಿಚಾರವಾದಿಗಳು ಮತ್ತು ಜನಸಾಮಾನ್ಯರಲ್ಲೂ ನಿಜವಾದ ಬದಲಾವಣೆ ಉಂಟಾಗಬೇಕಾಗಿದೆ. ಇಲ್ಲವಾದಲ್ಲಿ ಈ ವಿಶ್ವ ಪರಿಸರ ದಿನವು ಮತ್ತೊಂದು ಘೋಷಣಾ ದಿನವಾಗಿ ಮಾತ್ರ ಉಳಿಯಬಹುದು.



**– ಎಂ,ಎಚ್, ಸವದತ್ತಿ.**
**ಸಹಶಿಕ್ಷಕರು, ಸರ್ಕಾರಿ ಪ್ರೌಢಶಾಲೆ**
**ಏಕಲಾಸಪುರ.**

## ಲೈವ್ ಟಿವಿಯಲ್ಲಿ ಕಣ್ಣೀರಿಟ್ಟ ಆಕ್ಸಿಸ್ ಮೈ ಇಂಡಿಯಾದ ಪ್ರದೀಪ್ ಗುಪ್ತಾ

# ತಲೆಕೆಳಗಾದ ಎಕ್ಸಿಟ್ ಪೋಲ್ ಸಮೀಕ್ಷೆ

■ ವಿಜಯಸಾಕ್ಷಿ ಸುದ್ದಿ, 000

ಲೋಕಸಭೆ ಚುನಾವಣೆಯ ಎಕ್ಸಿಟ್ ಪೋಲ್ ಸಮೀಕ್ಷೆ ವಿಫಲವಾದ ಹಿನ್ನೆಲೆ 'ಆಕ್ಸಿಸ್ ಮೈ ಇಂಡಿಯಾ' ಸಂಸ್ಥೆಯ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಪ್ರದೀಪ್ ಗುಪ್ತಾ ಲೈವ್ ಟಿವಿಯಲ್ಲಿ ಕಣ್ಣೀರಿಟ್ಟಿದ್ದಾರೆ.

ಈ ಬಾರಿಯ ಚುನಾವಣೆಯಲ್ಲಿ ಎನ್‌ಡಿಎ ಒಕ್ಕೂಟ 361–401 ಸ್ಥಾನಗಳು, ಇಂಡಿಯಾ ಮೈತ್ರಿಕೂಟ 131–166 ಸ್ಥಾನಗಳು ಮತ್ತು ಇತರರು 8–20 ಸ್ಥಾನಗಳನ್ನು ಗೆಲ್ಲಬಹುದು ಎಂದು ಆಕ್ಸಿಸ್ ಮೈ ಇಂಡಿಯಾ ಎಕ್ಸಿಟ್ ಪೋಲ್ ಸಮೀಕ್ಷೆಯಲ್ಲಿ ಹೇಳಿತ್ತು.

ಆದರೆ, ಎಕ್ಸಿಟ್ ಪೋಲ್ ಸಂಪೂರ್ಣ ತಲೆಕೆಳಗಾಗಿದೆ. ಇದುವರೆಗಿನ ಮತ ಎಣಿಕೆಯ




ಪ್ರಕಾರ, ಎನ್‌ಡಿಎ ಒಕ್ಕೂಟ 293, ಇಂಡಿಯಾ ಮೈತ್ರಿಕೂಟ 233 ಮತ್ತು ಇತರರು 17 ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ. ಹಾಗಾಗಿ, ಇಂಡಿಯಾ ಟುಡೇ ವಾಹಿನಿಯ ಲೈವ್ ಟಿವಿ ಡಿಬೇಟ್‌ನಲ್ಲಿ ಪ್ರದೀಪ್ ಗುಪ್ತಾ ಕಣ್ಣೀರಿಟ್ಟಿದ್ದಾರೆ.

ಮತ ಎಣಿಕೆಯ ಮುನ್ನಾದಿನ (ಜೂನ್ 3) ಎಎನ್‌ಐ ಜೊತೆ ಮಾತನಾಡಿದ್ದ ಪ್ರದೀಪ್ ಗುಪ್ತಾ, "ಆಕ್ಸಿಸ್ ಮೈ ಇಂಡಿಯಾ ಕಳೆದ 10 ವರ್ಷಗಳಿಂದ ನಿರಂತರವಾಗಿ ಎಕ್ಸಿಟ್ ಪೋಲ್‌ಗಳನ್ನು ಮಾಡಿದೆ. ಎರಡು ಲೋಕಸಭೆ ಚುನಾವಣೆ ಸೇರಿದಂತೆ 69 ಚುನಾವಣೆಗಳಿಗೆ ಎಕ್ಸಿಟ್ ಪೋಲ್ ಸಮೀಕ್ಷೆ ನಡೆಸಿದ್ದೇವೆ. ಇದುವರೆಗೆ 65 ಬಾರಿ ನಮ್ಮ ಊಹೆ ಸರಿಯಾಗಿದೆ" ಎಂದಿದ್ದರು.

ಎಕ್ಸಿಟ್ ಪೋಲ್ ವಿಶ್ವಾಸಾರ್ಹತೆಗೆ ಸಂಬಂಧಿಸಿದಂತೆ ಪ್ರಶ್ನೆಗಳನ್ನು ಎತ್ತುವ ಜನರು ನಮ್ಮ ದಾಖಲೆಯನ್ನು ನೋಡಬೇಕು. ಅವರು ತೃಪ್ತರಾಗುತ್ತಾರೆ" ಎಂದು ಹೇಳಿದ್ದರು.

ಜೂನ್ 1ರಂದು ಶನಿವಾರದ ಅಂತಿಮ ಸುತ್ತಿನ ಮತದಾನದ ನಂತರ ಪ್ರಕಟಗೊಂಡ ಬಹುಪಾಲು ಎಕ್ಸಿಟ್ ಪೋಲ್‌ಗಳು ಬಿಜೆಪಿ ನೇತೃತ್ವದ ಎನ್‌ಡಿಎ ಭಾರೀ ಮುನ್ನಡೆ ಸಾಧಿಸಲಿದೆ ಎಂದು ಹೇಳಿತ್ತು. ವರದಿಗಳ ಪ್ರಕಾರ, ಒಟ್ಟು 14 ಎಕ್ಸಿಟ್ ಪೋಲ್‌ಗಳನ್ನು ಒಟ್ಟುಗೂಡಿಸಿ ನಡೆಸಿದ ಪೋಲ್ ಆಫ್ ಪೋಲ್‌ನಲ್ಲೂ ಎನ್‌ಡಿಎ 365 ಸ್ಥಾನಗಳನ್ನು ಗೆಲ್ಲುವುದಾಗಿ ಹೇಳಿತ್ತು.

## ಇಂದೋರ್‌ನಲ್ಲಿ 1.8 ಲಕ್ಷ ನೋಟಾ ಚಲಾವಣೆ; ಕಾಂಗ್ರೆಸ್ ಕರೆಗೆ ಉತ್ತಮ ಪ್ರತಿಕ್ರಿಯೆ



| | | |
|---|---|---|
| Trailing 5824 (-1019035) COMRADE AJEET SINGH Socialist Unity Centre Of India (COMMUNIST) | Trailing 3216 (-1021643) ENG. ARJUN PARIHAR Independent | Trailing 3113 (-1021746) BASANT GEHLOT Jan Sangh Party |
| Trailing 2235 (-1022624) MUDIT CHAURASIA Independent | Trailing 2227 (-1022632) RAVI SIRWAIYA Independent | Trailing 1987 (-1022872) PARMANAND TOLANI Independent |
| Trailing 1653 (-1023206) DESH BHAKT ANKIT GUPTA Independent | Trailing 1365 (-1023494) ADVOCATE PANKAJ GUPTE Independent | 182766 (-842093) NOTA None of the Above |

■ ವಿಜಯಸಾಕ್ಷಿ ಸುದ್ದಿ, ಇಂದೋರ್

ಮಧ್ಯಪ್ರದೇಶದ ಇಂದೋರ್‌ನಲ್ಲಿ ಲೋಕಸಭಾ ಚುನಾವಣಾ ಮತಗಳ ಆರಂಭಿಕ ಟ್ರೆಂಡ್‌ಗಳು ಮಂಗಳವಾರ ಮಧ್ಯಾಹ್ನದವರೆಗೆ ನೋಟಾ (ಮೇಲಿನ ಯಾರೂ ಅಲ್ಲ) 1.8 ಲಕ್ಷ ಮತಗಳನ್ನು ಗಳಿಸಿದೆ ಎಂದು ತೋರಿಸಿದೆ.

ಭಾರತೀಯ ಚುನಾವಣಾ ಆಯೋಗದ (ಇಸಿಐ) ಅಂಕಿಅಂಶಗಳ ಪ್ರಕಾರ, ಮಂಗಳವಾರ ಮಧ್ಯಾಹ್ನ 01 ಗಂಟೆಯವರೆಗೆ 182798 ನೋಟಾ ಮತಗಳು ಚಲಾವಣೆಯಾಗಿವೆ. ನೋಟಾ ಚುನಾವಣೆಯಲ್ಲಿ ಸ್ಪರ್ಧಿಸುವ ಎಲ್ಲಾ ಅಭ್ಯರ್ಥಿಗಳಿಗೆ ಅಧಿಕೃತವಾಗಿ "ತಿರಸ್ಕಾರದ ಮತ" ವನ್ನು ನೋಂದಾಯಿಸಲು ಮತದಾರರಿಗೆ ಅವಕಾಶ ನೀಡುತ್ತದೆ. ಸುಪ್ರೀಂ ಕೋರ್ಟ್ ತೀರ್ಪಿನ ನಂತರ ಇದನ್ನು ಸೆಪ್ಟೆಂಬರ್ 2013 ರಲ್ಲಿ ಪರಿಚಯಿಸಲಾಯಿತು.

ಇಂದೋರ್‌ನಲ್ಲಿ 14 ಅಭ್ಯರ್ಥಿಗಳು ಕಣದಲ್ಲಿದ್ದರೆ, ಬಿಜೆಪಿಯ ಹಾಲಿ ಸಂಸದ ಶಂಕರ್ ಲಾಲ್ವಾನಿ ಮತ್ತು ನೋಟಾ ನಡುವೆ ಪ್ರಮುಖ ಹೋರಾಟವಿದೆ. ಇಂದೋರ್‌ನಲ್ಲಿ ಮೇ 13 ರಂದು ಮತದಾನ ನಡೆದಿದ್ದು, 25.27 ಲಕ್ಷ ಮತದಾರರಲ್ಲಿ 61.75 ಪ್ರತಿಶತ ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಕಾಂಗ್ರೆಸ್ ಭವಿಷ್ಯವೇನು? ಮಧ್ಯಪ್ರದೇಶದ ಇಂದೋರ್ ಲೋಕಸಭಾ ಕ್ಷೇತ್ರದಿಂದ ತನ್ನ ಅಭ್ಯರ್ಥಿ ಹಿಂದೆ ಸರಿದ ನಂತರ ಕಣದಿಂದ ಹೊರಬಿದ್ದಿರುವ ಕಾಂಗ್ರೆಸ್, ನೋಟಾ ಎರಡು ಲಕ್ಷ ಮತಗಳನ್ನು ಗಳಿಸಲಿದೆ ಎಂದು ಸೋಮವಾರ ಹೇಳಿಕೊಂಡಿತ್ತು. ಏಪ್ರಿಲ್ 29 ರಂದು, ಕಾಂಗ್ರೆಸ್ ತನ್ನ ಅಭ್ಯರ್ಥಿ ಅಕ್ಷಯ್ ಕಾಂತಿ ಬಾಮ್ ತನ್ನ ನಾಮಪತ್ರವನ್ನು ಹಿಂತೆಗೆದುಕೊಂಡಾಗ ಗಮನಾರ್ಹ ಹೊಡೆತವನ್ನು ಎದುರಿಸಿತು.

## ತಮಿಳುನಾಡು: ಬಿಜೆಪಿ ರಾಜ್ಯಾಧ್ಯಕ್ಷ ಅಣ್ಣಾಮಲೈಗೆ ಹೀನಾಯ ಸೋಲು

■ ವಿಜಯಸಾಕ್ಷಿ ಸುದ್ದಿ, ತಮಿಳನಾಡು


ಲೋಕಸಭೆ ಚುನಾವಣೆ ಹಿನ್ನೆಲೆ ಮತ ಎಣಿಕೆ ಪ್ರಕ್ರಿಯೆ ನಡೆಯುತ್ತಿದ್ದು, ಎನ್‌ಡಿಎ 292 ಕ್ಷೇತ್ರಗಳಲ್ಲಿ ಮತ್ತು ಇಂಡಿಯಾ ಮೈತ್ರಿಕೂಟ 233 ಕ್ಷೇತ್ರಗಳಲ್ಲಿ ಮುನ್ನಡೆಯನ್ನು ಸಾಧಿಸಿದ್ದಾರೆ.

ಇತರರು 19 ಕ್ಷೇತ್ರಗಳಲ್ಲಿ ಮುನ್ನಡೆಯನ್ನು ಸಾಧಿಸಿದ್ದಾರೆ.

ಕೋಯಮತ್ತೂರಿನಲ್ಲಿ ಬಿಜೆಪಿ ಅಭ್ಯರ್ಥಿ ಅಣ್ಣಾಮಲೈ ಸೋಲನ್ನು ಕಂಡಿದ್ದು, ಡಿಎಂಕೆ ಅರ್ಭರ್ಥಿ ಗಣಪತಿ ರಾಜಕುಮಾರ್ ಅವರು ಗೆಲುವನ್ನು ಸಾಧಿಸಿದ್ದಾರೆ.

ಅಣ್ಣಾಮಲೈ ವಿರುದ್ಧ 18,000ಕ್ಕೂ ಅಧಿಕ ಮತಗಳಿಂದ ಗಣಪತಿ ರಾಜಕುಮಾರ್ ಗೆಲುವನ್ನು ಸಾಧಿಸಿದ್ದಾರೆ.

ಕರಾವಳಿಯ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಿಜೆಪಿ ಅಭ್ಯರ್ಥಿ ಬ್ರಿಜೇಶ್ ಚೌಟ ಕಾಂಗ್ರೆಸ್ ಅಭ್ಯರ್ಥಿ ಪದ್ಮರಾಜ್ ವಿರುದ್ಧ 1,14,000ಕ್ಕೂ ಅಧಿಕ ಮತಗಳ ಅಂತರದಿಂದ ಮುನ್ನ ಡೆಯನ್ನು



ಸಾಧಿಸಿದ್ದಾರೆ. ಅಚ್ಚರಿಯೆಂದರೆ ಈ ಬಾರಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 15, 239ಕ್ಕೂ ಅಧಿಕ ನೋಟಾ ಮತಗಳ ಚಲಾವಣ 'ಯಾಗಿದ್ದು, ನೋಟ ಮೂರನೇ ಸ್ಥಾನದಲ್ಲಿದೆ.

ಕೇಂದ್ರಾಡಳಿತ ಪ್ರದೇಶ ಲಕ್ಷದ್ವೀಪದಲ್ಲಿ ಕಾಂಗ್ರೆಸ್ ಮುನ್ನಡೆಯನ್ನು ಸಾಧಿಸಿದೆ. ಮಿಝೋರೋಂನ 1 ಕ್ಷೇತ್ರದಲ್ಲಿ ಪಕ್ಷೇತರ ಅಭ್ಯರ್ಥಿ ಮುನ್ನಡೆಯನ್ನು ಸಾಧಿಸಿದ್ದಾರೆ. ನಾಗಲ್ಯಾಂಡ್ನ 1 ಕ್ಷೇತ್ರದಲ್ಲಿ ಕಾಂಗ್ರೆಸ್ ಮುನ್ನಡೆಯನ್ನು ಸಾಧಿಸಿದೆ.ಪುದುಚೇರಿಯ 1 ಕ್ಷೇತ್ರದಲ್ಲಿ ಕಾಂಗ್ರೆಸ್ ಮುನ್ನಡೆಯನ್ನು ಸಾಧಿಸಿದೆ.

## ತಮಿಳುನಾಡು: ತಿರುವಳ್ಳೂರಿನಲ್ಲಿ ಶಶಿಕಾಂತ್ ಸೆಂಥಿಲ್‌ಗೆ ಭರ್ಜರಿ ಗೆಲುವು

■ ವಿಜಯಸಾಕ್ಷಿ ಸುದ್ದಿ, 000

ಲೋಕಸಭೆ ಚುನಾವಣೆ ಹಿನ್ನೆಲೆ ಮತ ಎಣಿಕೆ ಪ್ರಕ್ರಿಯೆ ನಡೆಯುತ್ತಿದ್ದು, ಎನ್‌ಡಿಎ 294 ಕ್ಷೇತ್ರಗಳಲ್ಲಿ ಮತ್ತು ಇಂಡಿಯಾ ಮೈತ್ರಿಕೂಟ 232 ಕ್ಷೇತ್ರಗಳಲ್ಲಿ ಮುನ್ನಡೆಯನ್ನು ಸಾಧಿಸಿದ್ದಾರೆ. ಇತರರು 32 ಕ್ಷೇತ್ರಗಳಲ್ಲಿ ಮುನ್ನಡೆಯನ್ನು ಸಾಧಿಸಿದ್ದಾರೆ.



ತಿರುವಳ್ಳೂರು ಕ್ಷೇತ್ರದಲ್ಲಿ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ, ದ.ಕನ್ನಡ ಮಾಜಿ ಜಿಲ್ಲಾಧಿಕಾರಿ ಶಶಿಕಾಂತ್ ಸೆಂಥಿಲ್ ಗೆಲುವನ್ನು ಸಾಧಿಸಿದ್ದಾರೆ.

ಶಶಿಕಾಂತ್ ಸೆಂಥಿಲ್ ಡಿಎಂಡಿಕೆಯ ನಲ್ಲತಂಬಿ ವಿರುದ್ಧ 2 ಲಕ್ಷ 14 ಸಾವಿರಕ್ಕೂ ಅಧಿಕ ಮತಗಳ ಅಂತರದಿಂದ ಗೆಲುವನ್ನು ಸಾಧಿಸಿದ್ದಾರೆ.

ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬಾಲಗಣಪತಿ ಮೂರನೇ ಸ್ಥಾನಕ್ಕೆ ತಳ್ಳಲ್ಪಟ್ಟಿದ್ದಾರೆ.

ತಿರುವಳ್ಳೂರು ಕ್ಷೇತ್ರದಲ್ಲಿ ಶಶಿಕಾಂತ್ ಸೆಂಥಿಲ್ ಆರಂಭದಿಂದಲೇ ಭಾರೀ ಅಂತರದಲ್ಲಿ ಮುನ್ನಡೆಯನ್ನು ಸಾಧಿಸಿದ್ದರು.

## ರಾಜ್ಯ ರಾಜಧಾನಿಯಲ್ಲಿ ಕಾಂಗ್ರೆಸ್‌ಗೆ ಭಾರೀ ಹಿನ್ನಡೆ

## ಬೆಂಗಳೂರಿನ ಎಲ್ಲಾ ಕ್ಷೇತ್ರಗಳು ಬಿಜೆಪಿ ಪಾಲು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲೋಕಸಭೆ ಚುನಾವಣೆಯ ಫಲಿತಾಂಶ ಪ್ರಕಟವಾಗಿದ್ದು, ರಾಜ್ಯ ರಾಜಧಾನಿ ಬೆಂಗಳೂರಿನ ಎಲ್ಲಾ 4 ಕ್ಷೇತ್ರಗಳು ಬಿಜೆಪಿ ಪಾಲಾಗಿದೆ. ಇದು ರಾಜ್ಯದಲ್ಲಿರುವ ಕಾಂಗ್ರೆಸ್‌ಗೆ ದೊಡ್ಡ ಹಿನ್ನಡೆಯಾಗಿದ್ದು, ಕಾಂಗ್ರೆಸ್ ನೀಡಿದ್ದ ಗ್ಯಾರೆಂಟಿಗಳು ಲೋಕಸಭೆ ಚುನಾವಣೆಯಲ್ಲಿ ಕೈ ಹಿಡಿಯಲಿಲ್ಲ ಎನ್ನುವುದು ಫಲಿತಾಂಶದಿಂದ ಸ್ಪಷ್ಟವಾಗಿ ತಿಳಿದು ಬರುತ್ತದೆ.

**ಬೆಂಗಳೂರು ಗ್ರಾಮಾಂತರದಲ್ಲಿ ಡಾ.ಮಂಜುನಾಥ್‌ಗೆ ಗೆಲುವು:** ಬೆಂಗಳೂರು ಗ್ರಾಮಾಂತರದಲ್ಲಿ ಹಾಲಿ ಸಂಸದ, ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ ಸುರೇಶ್ ವಿರುದ್ಧ ಎನ್‌ಡಿಎ ಅಭ್ಯರ್ಥಿ ಡಾ.ಮಂಜುನಾಥ್ 2,68.094 ಮತಗಳ ಅಂತರದಿಂದ ಭರ್ಜರಿ ಗೆಲುವನ್ನು ಸಾಧಿಸಿದ್ದಾರೆ. ಈ ಕ್ಷೇತ್ರವನ್ನು ಡಿಕೆ ಬ್ರದಸ್ ಪ್ರತಿಷ್ಠೆಯ ಕಣವನ್ನಾಗಿ ಸ್ವೀಕರಿಸಿ ಪ್ರಚಾರ ಮಾಡಿದ್ದರು. ಡಿ.ಕೆ ಸುರೇಶ್ ಗೆಲುವು ನಿಶ್ಚಿತ ಎಂದು ಹೇಳಲಾಗಿತ್ತು. ಆದರೆ ಫಲಿತಾಂಶ ಇದೀಗ ಕಾಂಗ್ರೆಸ್ ಪಾಲಯದಲ್ಲಿ



ಅದರಲ್ಲೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಡಿಕೆ ಸುರೇಶ್ ಅವರಲ್ಲಿ ನಿರಾಶೆ ಮೂಡಿಸಿದೆ. ಇದಲ್ಲದೆ 10,633 ಮತಗಳು ನೋಟಾಗೆ ಬಿದ್ದಿದ್ದು, ಕ್ಷೇತ್ರದಲ್ಲಿ ಮೂರನೇ ಸ್ಥಾನದಲ್ಲಿ ನೋಟಾ ಇದೆ.

**ಬೆಂಗಳೂರು ದಕ್ಷಿಣ:** ಬೆಂಗಳೂರು ದಕ್ಷಿಣದಲ್ಲಿ ಎನ್‌ಡಿಎ ಅಭ್ಯರ್ಥಿ ತೇಜಸ್ವಿ ಸೂರ್ಯ, ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ಸೌಮ್ಯ ರೆಡ್ಡಿ ವಿರುದ್ಧ 2,68,028 ಮತಗಳ ಅಂತರದಿಂದ ಗೆಲುವನ್ನು ಸಾಧಿಸಿದ್ದಾರೆ. ಕ್ಷೇತ್ರದಲ್ಲಿ 7,27,537 ಮತಗಳು ತೇಜಸ್ವಿ ಸೂರ್ಯಗೆ ಬಿದ್ದಿದ್ದು, 4,59,460 ಮತಗಳನ್ನು ಸೌಮ್ಯ ರೆಡ್ಡಿ ಪಡೆದಿದ್ದಾರೆ. 7,617 ಮತಗಳು ನೋಟಾಕ್ಕೆ ಬಿದ್ದಿದೆ. ಹಾಲಿ ಸಚಿವ ರಾಮಲಿಂಗಾರೆಡ್ಡಿ ಪುತ್ರಿ ಹಾಗೂ ಮಾಜಿ ಶಾಸಕಿ ಸೌಮ್ಯ ಪರ ಕ್ಷೇತ್ರದಲ್ಲಿ ಒಲವು ಇತ್ತು, ಆದರೆ ಅಂತಿಮವಾಗಿ ತೇಜಸ್ವಿ ಸೂರ್ಯ ಗೆಲುವನ್ನು ಸಾಧಿಸಿದ್ದಾರೆ.

**ಬೆಂಗಳೂರು ಉತ್ತರ:** ಬೆಂಗಳೂರು ಉತ್ತರ ಕ್ಷೇತ್ರದಲ್ಲಿ ಹಾಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜೀವ್ ಗೌಡ ಎದುರು 2,62,537 ಮತಗಳ ಅಂತರದಿಂದ ಗೆಲುವನ್ನು ಸಾಧಿಸಿದ್ದಾರೆ. ಶೋಭಾ ಕರಂದ್ಲಾಜೆ ಪರವಾಗಿ 9,74,909 ಮತಗಳು ಚಲಾವಣೆಯಾಗಿದ್ದು, ರಾಜೀವ್ ಗೌಡಗೆ 7,12,372 ಮತಗಳು ಸಿಕ್ಕಿದೆ.

ಕ್ಷೇತ್ರದಲ್ಲಿ 13,375 ಮತಗಳು ನೋಟಾ ಪರ ಚಲಾವಣೆಯಾಗಿದೆ. ಉಡುಪಿ ಚಿಕ್ಕಮಗಳೂರು ಕ್ಷೇತ್ರವನ್ನು ಈ ಹಿಂದೆ ಪ್ರತಿನಿಧಿಸುತ್ತಿದ್ದ ಶೋಭಾ ಕರಂದ್ಲಾಜೆಗೆ ಕ್ಷೇತ್ರದಲ್ಲಿ ಕಳಪೆ ಪದರ್ಶನ ಹಿನ್ನೆಲೆ ಪಕ್ಷಬಿಟ್ಟು ಬೆಂಗಳೂರು ಕಡೆಗೆ ಮುಖಮಾಡಿದ್ದರು. ಅವರ ಸೋಲು ಪಕ್ಕಾ ಎಂದು ಹೇಳಲಾಗಿತ್ತು. ಆದರೆ ಇದೀಗ ಚುನಾವಣೆ ಫಲಿತಾಂಶ ಶೋಭಾ ಕರಂದ್ಲಾಜೆಗೆ ಭರ್ಜರಿ ಸಿಹಿ ಸುದ್ದಿಯನ್ನು ನೀಡಿದೆ.

**ಬೆಂಗಳೂರು ಸೆಂಟ್ರಲ್**

ಬೆಂಗಳೂರು ಸೆಂಟ್ರಲ್ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿ ಖಾನ್ ವಿರುದ್ಧ ಬಿಜೆಪಿ ಅಭ್ಯರ್ಥಿ ಪಿ.ಸಿ ಮೋಹನ್ 27,899 ಮತಗಳಿಂದ ಗೆಲುವನ್ನು ಸಾಧಿಸಿದ್ದಾರೆ.

## ಪ್ರಧಾನಿಗೆ ನೈತಿಕ ಸೋಲು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆ ಚುನಾವಣೆಯ ಮತ ಎಣಿಕೆಯ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಿನ್ನಡೆ ಅನುಭವಿಸಿದ್ದರು. ಅಲ್ಲದೆ, ಎನ್‌ಡಿಎ ಮೈತ್ರಿಕೂಟ ನಿರೀಕ್ಷಿತ ಮಟ್ಟದಲ್ಲಿ ಸ್ಥಾನಗಳನ್ನು ಪಡೆದಿಲ್ಲ.

ಈ ಬೆಳವಣಿಗೆಯನ್ನು ಮೋದಿಯವರ 'ರಾಜಕೀಯ ಮತ್ತು ನೈತಿಕ ಸೋಲು' ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಬಣ್ಣಿಸಿದ್ದು, ಮೋದಿ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಪ್ರಧಾನಿ ಅಭ್ಯರ್ಥಿ ಹಿನ್ನಡೆ ಅನುಭವಿಸಿದ ಇತಿಹಾಸವಿಲ್ಲ. ಈ ರೀತಿ ಇದುವರೆಗೆ ನಡೆದಿಲ್ಲ. ಪ್ರಧಾನಿಯವರು ತಮ್ಮ ಚುನಾವಣಾ ಪ್ರಚಾರದಲ್ಲಿ ಟ್ರೈಲರ್ ನೋಡಿ ಎಂದು ಹೇಳುತ್ತಿದ್ದರು.

## ಲೋಕಸಭೆ ಫಲಿತಾಂಶ: ಕರ್ನಾಟಕ ಕಾಂಗ್ರೆಸ್‌ನ ಆರು ಸಚಿವರ ಮಕ್ಕಳಲ್ಲಿ ಮೂವರಿಗೆ ಗೆಲುವು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲೋಕಸಭಾ ಚುನಾವಣೆ ಫಲಿತಾಂಶ ಪ್ರಕಟವಾಗಿದ್ದು, ಕರ್ನಾಟಕದಲ್ಲಿ ಕಣಕ್ಕಿಳಿದಿದ್ದ ಕಾಂಗ್ರೆಸ್‌ನ ಆರು ಸಚಿವರ ಮಕ್ಕಳ ಪೈಕಿ ಮೂವರು ಗೆಲುವು ಸಾಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಚಿಕ್ಕೋಡಿ ಕ್ಷೇತ್ರದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ ಅವರು ಬಿಜೆಪಿ ಅಭ್ಯರ್ಥಿ ಅಣ್ಣಾ ಸಾಹೇಬ್ ಜೊಲ್ಲೆ ಅವರನ್ನು ಸೋಲಿಸುವ ಮೂಲಕ ಗೆಲುವಿನ ನಗೆ ಬೀರಿದ್ದಾರೆ. ಈ ಮೂಲಕ ಮೊದಲ ಬಾರಿಗೆ ಸಂಸತ್ ಪ್ರವೇಶಿಸುತ್ತಿದ್ದಾರೆ.

ಬೀದರ್ ಕ್ಷೇತ್ರದಲ್ಲಿ ಸಚಿವ ಈಶ್ವರ್ ಖಂಡ್ರೆ ಪುತ್ರ ಸಾಗರ್ ಖಂಡ್ರೆ ಅವರು ಗೆಲುವು ಸಾಧಿಸಿದ್ದು, ರಾಜ್ಯದ ಕಿರಿಯ ಸಂಸದ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ಬಿಜೆಪಿಯ ಭಗವಂತ ಖೂಬಾ ಸೋಲು ಅನುಭವಿಸಿದ್ದಾರೆ.

ಮಳೆಯ ರೌದ್ರಾವತಾರಕ್ಕೆ ಬೆಚ್ಚಿಬಿದ್ದ ತಾಲೂಕಿನ ಜನತೆ । ಹಲವೆಡೆ ಅವಾಂತರ ಸೃಷ್ಟಿ

# ಮುಂಗಾರು ಮಳೆಗೆ ನಡುಗಿದ ಲಕ್ಷ್ಮೇಶ್ವರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣ ಸೇರಿ ತಾಲೂಕಿನ ಬಹುತೇಕ ಕಡೆ ಸೋಮವಾರ ಸಂಜೆ ಮತ್ತು ಮಂಗಳವಾರ ಬೆಳಿಗ್ಗೆ ಸುರಿದ ಅಬ್ಬರದ ಗಾಳಿ-ಮಳೆ ಅನೇಕ ಆವಾಂತರಗಳನ್ನು ಸೃಷ್ಟಿಸಿದೆ.

ಪಟ್ಟಣದಲ್ಲಿ ಚರಂಡಿಗಳು ತುಂಬಿ ರಸ್ತೆ ಮೇಲೆಯೇ ಹರಿದು ಅನೇಕ ಕಡೆ ಸಂಚಾರ ಅಸ್ತವ್ಯಸ್ಥಗೊಂಡಿತ್ತು. ಕಟ್ಟಿದ್ದ ಚರಂಡಿ, ಲಂಡಿ ನಾಲಾವನ್ನು ಮಳೆಯಲ್ಲಿಯೇ ಪುರಸಭೆ ಪೌರ ಕಾರ್ಮಿಕರು ಸ್ವಚ್ಛಗೊಳಿಸಿದರು.

ತಾಲೂಕಿನ ಗೊಜನೂರ ಹತ್ತಿರದ ವರ್ತಿ ಹಳ್ಳ ಅತ್ಯಂತ ರಭಸವಾಗಿ ಹರಿಯುತ್ತಿದ್ದರಿಂದ 2 ಗಂಟೆಗಳ ಕಾಲ ಗದಗ-ಲಕ್ಷ್ಮೇಶ್ವರ ಸಂಪರ್ಕ ಕಲ್ಪಿಸುವ ಕೈಗಾ-ಇಳಕಲ್ ರಾಜ್ಯ ಹೆದ್ದಾರಿ ಸಂಚಾರ ಸ್ಥಗಿತಗೊಂಡಿತ್ತು. ಗದಗನಿಂದ ಲಕ್ಷ್ಮೇಶ್ವರದ ಕಡೆ-ಲಕ್ಷ್ಮೇಶ್ವರದಿಂದ ಗದಗ ಕಡೆಗೆ ಹೋಗಬೇಕಾದ ವಾಹನಗಳು ಹಳ್ಳದ ಎರಡೂ ಬದಿ 1 ಕಿ.ಮೀ ದೂರಕ್ಕೆ ಸಾಲುಗಟ್ಟಿ 1 ಗಂಟೆಗೂ ಹೆಚ್ಚು ಕಾಲ



ರಸ್ತೆ ಮಧ್ಯದಲ್ಲಿಯೇ ನಿಂತ ಪರಿಣಾಮ ಸಾಕಷ್ಟು ಟ್ರಾಫಿಕ್ ಕಿರಿಕಿರಿಯುಂಟಾಯಿತು.

ಈ ವೇಳೆ ಗ್ರಾಮದ ಗ್ರಾ.ಪಂ ಮಾಜಿ ಸದಸ್ಯ ಶಿವರಾಜಗೌಡ ಪಾಟೀಲ ಪ್ರತಿವರ್ಷ ಮಳೆಗಾಲದಲ್ಲಿ ಈ ಸಮಸ್ಯೆ ತಪ್ಪದಂತಾಗಿದ್ದು, ಈ ಭಾಗದ ನೂತನ ಸಂಸದರು, ಶಾಸಕರು ಸೇತುವೆ ನಿರ್ಮಾಣಕ್ಕೆ ಗಮನ ಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಬಡ್ನಿ ಹತ್ತಿರದ ದೊಡ್ಡ ಹಳ್ಳದ ಸೇತುವೆ ಕೊಚ್ಚಿ ಹೋಗಿ ಲಕ್ಷ್ಮೇಶ್ವರ-ದೇವಿಹಾಳ ಸಂಪರ್ಕದ ರಸ್ತೆ ಸಂಪೂರ್ಣ ಸ್ಥಗಿತಗೊಂಡಿದ್ದು, ಈ ಭಾಗದ ಗ್ರಾಮಗಳ ಜನರು ಸುತ್ತುವರಿದು ಸಂಚರಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ತಾತ್ಕಾಲಿಕವಾಗಿ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಗ್ರಾಮದ ಸತೀಶಗೌಡ ಪಾಟೀಲ ಆಗ್ರಹಿಸಿದ್ದಾರೆ.

ಅಕ್ಕಿಗುಂದ, ಬಟ್ಟೂರ, ದೊಡ್ಡೂರ ಮಾರ್ಗದ ಹಳ್ಳಗಳು ಅಪಾಯದ ಮಟ್ಟ ಮೀರಿ ಹರಿದಿವೆ. ಬರಗಾಲದಿಂದ ಕಂಗೆಟ್ಟಿದ್ದ ಜನಸಮುದಾಯಕ್ಕೆ ಈ ಮಳೆ ಕೊಂಚ ನೆಮ್ಮದಿ ತಂದಿದ್ದರೂ, ಕೆಲವೆಡೆ ಮಳೆಯ ರುದ್ರ ನರ್ತನದಿಂದ ಬೆಚ್ಚಿ ಬೀಳುವಂತಾಗಿದೆ.


ಕೆರೆ, ಕೃಷಿಹೊಂಡ ತುಂಬಿದ್ದು ಹಳ್ಳ, ಬಾಂದಾರ ನದಿಯಂತೆ ಭೋರ್ಗರೆದಿವೆ. ಮಳೆರಾಯನ ಆಗಮನಕ್ಕಾಗಿ ಕಾಯುತ್ತಿದ್ದ ರೈತರು ಜಮೀನುಗಳನ್ನೆಲ್ಲ ಹದಗೊಳಿಸಿದ್ದ ಕೆಲವೇ ರೈತರು ಬಿತ್ತನೆ ಮಾಡಿದ್ದು, ಬಿತ್ತನೆಗೆ ಸಕಾಲವಾಗಿದ್ದರಿಂದ ಬಹುತೇಕ ರೈತರು ಒಂದು ವಾರದ ಕಾಲ ಮಳೆ ಬಿಡುವಿಗೆ ಮೊರೆ ಹೋಗುವಂತಾಗಿದೆ. ಆದರೆ ಹವಾಮಾನ ಇಲಾಖೆ ಇನ್ನೂ ಒಂದು ವಾರ ಕಾಲ ಮುಂಗಾರು ಚುರುಕುಗೊಳ್ಳಲಿದೆ ಎಂಬ ಮಾಹಿತಿ ರೈತರನ್ನು ಚಿಂತೆಗೀಡು ಮಾಡಿದೆ.

ಯತ್ನಳ್ಳಿ- ಮಾಡಳ್ಳಿ ಸಂಪರ್ಕ ಕಲ್ಪಿಸುವ ಮಾರ್ಗದ ಹಳ್ಳ ಅಪಾರ ಸೆಳವಿನಿಂದ ಸೋಮವಾರ ರಾತ್ರಿಯಿಂದಲೇ ಸಂಪರ್ಕ ಕಡಿತಗೊಂಡು ಎರಡೂ ಗ್ರಾಮದ ಜನರು ಆಯಾ ಊರಲ್ಲಿಯೇ ಆಶ್ರಯ ಪಡೆಯುವಂತಾಗಿತ್ತು. ಪ್ರತಿ ವರ್ಷದ ಮಳೆಗಾಲದಲ್ಲಾಗುವ ಸಮಸ್ಯೆ ತಪ್ಪಿಸಲು ಹಳ್ಳಕ್ಕೆ ಸೇತುವೆ ನಿರ್ಮಿಸಬೇಕು ಎಂದು ಗ್ರಾಮದ ಡಿ.ಬಿ. ಡೊಳ್ಳಿನ, ಶೇಖರಗೌಡ ಪಾಟೀಲ ಆಗ್ರಹಿಸಿದ್ದಾರೆ.



## ಲೋಕಸಭೆ ಚುನಾವಣೆ; ಹಿಮಾಚಲದ ಮಂಡಿಯಲ್ಲಿ ಕಂಗನಾ ರಣಾವತ್‌ಗೆ ಗೆಲುವು

■ವಿಜಯಸಾಕ್ಷಿ ಸುದ್ದಿ, ಮಂಡಿ



ಹಿಮಾಚಲ ಪ್ರದೇಶದ ಮಂಡಿ ಲೋಕಸಭಾ ಕ್ಷೇತ್ರದಿಂದ ಚುನಾವಣೆಗೆ ಸ್ಪರ್ಧಿಸಿದ್ದ ಬಾಲಿವುಡ್ ನಟಿ ಕಂಗನಾ ರಣಾವತ್ ಗೆಲುವು ದಾಖಲಿಸಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ವಿಕ್ರಮಾದಿತ್ಯ ಸಿಂಗ್ ವಿರುದ್ಧ 74,755 ಮತಗಳ ಅಂತರದಲ್ಲಿ ಕಂಗನಾ ಗೆಲುವು ಖಂಡಿದ್ದು, ವಿಕ್ರಮಾದಿತ್ಯ ಸಿಂಗ್ 4,62,267 ಮತಗಳನ್ನು ಪಡೆದರೆ, ಕಂಗನಾ 5,37,022 ಮತಗಳನ್ನು ಗಳಿಸಿದ್ದಾರೆ.

ಹಿಮಾಚಲ ಪ್ರದೇಶದ ಮಾಜಿ ಮುಖ್ಯಮಂತ್ರಿ ವೀರಭದ್ರ ಸಿಂಗ್ ಅವರ ಪುತ್ರರಾಗಿರುವ ಕಾಂಗ್ರೆಸ್‌ನ ವಿಕ್ರಮಾದಿತ್ಯ ಸಿಂಗ್ ವಿರುದ್ಧ ಸಿನಿಮಾ ನಟಿಯಾಗಿರುವ ಕಂಗನಾ ರಾಜಕೀಯಕ್ಕೆ ಪಾದಾರ್ಪಣೆ ಮಾಡುತ್ತಲೇ ಗೆದ್ದು ಬೀಗಿದ್ದಾರೆ.

34 ವರ್ಷದ ಸಿಂಗ್, ಈ ಹಿಂದೆ ಎರಡು ವಿಧಾನಸಭಾ ಚುನಾವಣೆಗಳಲ್ಲಿ ಸ್ಪರ್ಧಿಸಿದ್ದರು. ಆದರೆ, ಇದೇ ಮೊದಲ ಬಾರಿಗೆ ಸಂಸತ್ ಚುನಾವಣಾ ಕಣಕ್ಕಿಳಿದಿದ್ದರು.

ಮಂಡಿ ಲೋಕಸಭಾ ಕ್ಷೇತ್ರದಲ್ಲಿ ಭಾರತೀಯ ಜನತಾ ಪಕ್ಷದ ರಾಮ್ ಸ್ವರೂಪ್ ಶರ್ಮಾ ಅವರು 2014 ಮತ್ತು 2019 ರಲ್ಲಿ ಕ್ರಮವಾಗಿ 49.97% ಮತ್ತು 68.75% ಮತಗಳನ್ನು ಗಳಿಸಿದ್ದರು.

ಮಾರ್ಚ್ 17, 2021 ರಂದು ಶರ್ಮಾ ಅವರ ನಿಧನದಿಂದಾಗಿ ತೆರವಾದ ಸ್ಥಾನಕ್ಕೆ ನಡೆದ ಉಪಚುನಾವಣೆಯಲ್ಲಿ ವಿಕ್ರಮಾದಿತ್ಯ ಸಿಂಗ್ ಅವರ ತಾಯಿ ಪ್ರತಿಭಾ ಸಿಂಗ್ ಅವರು ಕಾಂಗ್ರೆಸ್‌ನಿಂದ ಸ್ಪರ್ಧಿಸಿ ಗೆದ್ದಿದ್ದರು.

ಕಳೆದ ಎರಡು ವರ್ಷಗಳಿಂದ ಬಿಜೆಪಿ ಪರ ಬ್ಯಾಟಿಂಗ್ ಮಾಡುತ್ತಿದ್ದ ಕಂಗನಾ ರಣಾವತ್, ಈ ಬಾರಿಯ ಲೋಕಸಭಾ ಚುನಾವಣೆಗೂ ಮುನ್ನ ಅಧಿಕೃತವಾಗಿ ಬಿಜೆಪಿ ಸೇರಿದ್ದರು. ಈ ಬೆನ್ನಲ್ಲೇ ಅವರಿಗೆ ಪಕ್ಷ ಟಿಕೆಟ್ ನೀಡಿತ್ತು.

## ಲೋಕಸಭೆ ಫಲಿತಾಂಶ: ಅಮೇಥಿಯಲ್ಲಿ ಸ್ಮೃತಿ ಇರಾನಿಗೆ ಹೀನಾಯ ಸೋಲು

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಲೋಕಸಭಾ ಚುನಾವಣೆಯಲ್ಲಿ ಉತ್ತರ ಪ್ರದೇಶದ ಅಮೇಥಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಕೇಂದ್ರ ಸಚಿವೆ ಸ್ಮೃತಿ ಇರಾನಿಗೆ ಸೋಲಾಗಿದೆ. ಈ ಮೂಲಕ ಭಾರೀ ಮುಖಭಂಗ ಅನುಭವಿಸಿದ್ದಾರೆ.

ಕಾಂಗ್ರೆಸ್ ಭದ್ರಕೋ-ಟೆಯಾಗಿದ್ದ ಅಮೇಥಿಯಲ್ಲಿ ಎರಡು ಭಾರೀ ಗೆದ್ದು ದೇಶದ ಗಮನ ಸೆಳೆದಿದ್ದ ಸ್ಮೃತಿ ಇರಾನಿ, ಈ ಬಾರಿಯೂ ಗೆಲ್ಲುವ ವಿಶ್ವಾಸ ಹೊಂದಿದ್ದರು. ಆದರೆ, ಗಾಂಧಿ ಕಾಂಗ್ರೆಸ್ ಅಭ್ಯರ್ಥಿ ಕಿಶೋರಿ ಲಾಲ್ ವಿರುದ್ಧ ಹೀನಾಯವಾಗಿ ಸೋತಿದ್ದಾರೆ.

2019ರಲ್ಲಿ ಅಮೇಥಿಯಲ್ಲಿ ಮೊದಲ ಬಾರಿ ಗೆದ್ದಿದ್ದ ಸ್ಮೃತಿ ಇರಾನಿ, ಬಳಿಕ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯನ್ನು ಟೀಕಿಸುತ್ತಾ ಬಂದಿದ್ದರು. ಈ ಬಾರಿಯೂ ಕಾಂಗ್ರೆಸ್ ಅಭ್ಯರ್ಥಿಯನ್ನು ಗೇಲಿ ಮಾಡಿದ್ದ ಇರಾನಿ, ತನ್ನನ್ನು ಸೋಲಿಸಲು ಯಾರಿಗೂ ಸಾಧ್ಯವಿಲ್ಲ ಅಂದುಕೊಂಡಿದ್ದರು. ಆದರೆ, ಮತದಾರರು ಸ್ಮೃತಿಗೆ ಸೋಲಿನ ರುಚಿ ತೋರಿಸಿದ್ದಾರೆ.

ಈ ಬಾರಿಯ ಚುನಾವಣೆಯಲ್ಲಿ ರಾಹುಲ್ ಗಾಂಧಿ ಅಮೇಥಿಯಲ್ಲಿ ಸ್ಪರ್ಧಿಸುತ್ತಿಲ್ಲ ಎಂದು ಗೊತ್ತಾದಾಗ "ಚುನಾವಣೆಗೆ ಮುನ್ನವೇ ಕಾಂಗ್ರೆಸ್ ಸೋಲೊಪ್ಪಿಕೊಂಡಿದೆ. ರಾಹುಲ್ ಗಾಂಧಿ ಸೋಲಿಗೆ ಹೆದರಿ ರಾಯ್‌ಬರೇಲಿಗೆ ಓಡಿದ್ದಾರೆ" ಎಂದು ಸ್ಮೃತಿ ಹೇಳಿದ್ದರು. ಆದರೆ, ಈಗ ಗಾಂಧಿ ಕುಟುಂಬದ ಆಪ್ತ ಕಿಶೋರಿಲಾಲ್ ಎದುರು ಸ್ಮೃತಿ ಹೀನಾಯವಾಗಿ ಸೋತಿದ್ದಾರೆ.

ಸಂಜೆ 5:30ರವರೆಗೆ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಅಪ್ಲೋಡ್ ಮಾಡಲಾದ ಅಂಕಿ ಅಂಶಗಳ ಪ್ರಕಾರ, ಕಾಂಗ್ರೆಸ್‌ನ ಕಿಶೋರಿ ಲಾಲ್ 5,24,892 ಮತಗಳನ್ನು ಪಡೆದಿದ್ದು, ಸ್ಮೃತಿ ಇರಾನಿ 3,63,626 ಮತಗಳನ್ನು ಗಳಿಸಿದ್ದಾರೆ. 1,61,266 ಮತಗಳ ಅಂತರದಲ್ಲಿ ಸ್ಮೃತಿ ಹಿನ್ನಡೆ ಅನುಭವಿಸಿದ್ದಾರೆ. ಸ್ಮೃತಿ ಇರಾನಿ ಗುಜರಾತ್‌ನಿಂದ 2011ರಲ್ಲಿ ಮೊದಲ ಬಾರಿಗೆ ರಾಜ್ಯಸಭೆಗೆ ಪ್ರವೇಶಿಸಿದ್ದರು. ನಂತರ ಆಗಸ್ಟ್ 2017 ರಲ್ಲಿ ಮರು ಆಯ್ಕೆಯಾದರು.


ಪ್ರಸ್ತುತ ಅವರು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ಜವಳಿ ಖಾತೆ ಸಚಿವರಾಗಿದ್ದಾರೆ. ಮೇ 2014 ಮತ್ತು ಜುಲೈ 2016 ರ ನಡುವೆ ಅವರು ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಜುಲೈ 2017 ರಿಂದ ಮೇ 2018 ರವರೆಗೆ ವಾಹಿತಿ ಮತ್ತು ಪ್ರಸಾರ ಖಾತೆ ಸಚಿವರಾಗಿದ್ದರು.

ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಜಿ.ಎಸ್. ಗಡ್ಡದೇವರಮಠ

## ಸೋಲಿಗೆ ಪರಾಮರ್ಶೆ ಅನಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ-ಗದಗ ಲೋಕಸಭಾ ಚುನಾವಣೆಯಲ್ಲಿ ನನ್ನ ಪುತ್ರ ಆನಂದಸ್ವಾಮಿ ಗಡ್ಡದೇವರಮಠ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ವಿರುದ್ಧ ಸೆಣಸಿ ಕಡಿಮೆ ಅಂತರದಲ್ಲಿ ಸೋಲು ಕಂಡಿದ್ದು ಮತದಾರರ ತೀರ್ಮಾನವನ್ನು ಶಿರಸಾವಹಿಸಿ ಸ್ವೀಕರಿಸುತ್ತೇವೆ ಮತ್ತು ಅವರ ಚುನಾವಣೆಯ ಕಾರ್ಯದಲ್ಲಿ ಶ್ರಮಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇವೆ ಎಂದು ಮಾಜಿ ಶಾಸಕ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಪಕ್ಷದ ಮಾಜಿ ಅಧ್ಯಕ್ಷ ಜಿ.ಎಸ್. ಗಡ್ಡದೇವರಮಠ



ಹೇಳಿದರು.

ಅವರ ನಿವಾಸದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಹಾವೇರಿ-ಗದಗ ಕ್ಷೇತ್ರ ತುಂಬಾ ವಿಶಾಲವಾದ ಕ್ಷೇತ್ರವಾಗಿದ್ದು, ಇಡೀ ಕ್ಷೇತ್ರವನ್ನು ಸುತ್ತಿ ಎಲ್ಲ ಮತದಾರರನ್ನು ಭೇಟಿಯಾಗಿ ಅವರ ಹೃದಯ ಗೆಲ್ಲುವ ಕೆಲಸ ಮಾಡಿದ್ದೇವೆ. ಎಲ್ಲ ಕಡೆ ಜನರು ನೀಡಿದ ಪ್ರೀತಿ, ವಿಶ್ವಾಸ ಹಾಗೂ ಸ್ವಾಗತ ನಿಜಕ್ಕೂ ಸ್ಮರಣಾರ್ಹವಾದ ಸಂಗತಿಯಾಗಿದೆ. ಸೋಲಿಗೆ ಯಾರನ್ನೂ ದೂಷಿಸುವದಿಲ್ಲ, ಸೋಲಿಗೆ ಪರಾಮರ್ಶೆಯೂ ಅನಗತ್ಯ. ಮತದಾರರು ನೀಡಿದ ತೀರ್ಪನ್ನು ಪ್ರಾಮಾಣಿಕವಾಗಿ ಸ್ವೀಕರಿಸುತ್ತೇವೆ ಎಂದರು.

ಚಿಕ್ಕ ವಯಸ್ಸಿನಲ್ಲಿ ದೊಡ್ಡ ಜವಾಬ್ದಾರಿ ನಿಭಾಯಿಸುವ ಎಲ್ಲ ಸಾಮರ್ಥ್ಯವನ್ನು ಆನಂದಸ್ವಾಮಿ ಹೊಂದಿದ್ದಾರೆ. ಆತನ ಸಂಘಟನಾ ಶಕ್ತಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಟಿಕೆಟ್ ನೀಡಿದ್ದು ಹಾಗೂ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಎಲ್ಲ ಮಂತ್ರಿಗಳು, ಶಾಸಕರು, ಮಾಜಿ ಶಾಸಕರು, ಮುಖಂಡರು, ಕಾರ್ಯಕರ್ತರು ಶ್ರಮವಹಿಸಿದ್ದಾರೆ. ಮುಂದಿನ ದಿನಗಳಲ್ಲಿ ಪಕ್ಷದ ಸಂಘಟನೆಯಲ್ಲಿ ತೆ-ಡಗೋಣ, ಕಾರ್ಯಕರ್ತರು ಧೈರ್ಯಗುಂದುವದು ಬೇಡ ಎಂದ ಅವರ ಮಾತಿನಲ್ಲಿ ರಾಜಕೀಯ ಕೊಂಚ ಬೇಸರ ತರಿಸಿರುವ ಭಾವವಿತ್ತು.

## ಮೊದಲು ಇಂಡಿಯಾ ಒಕ್ಕೂಟದ ಸದಸ್ಯರ ಜೊತೆ ಚರ್ಚೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಇಂಡಿಯಾ ಮೈತ್ರಿಕೂಟದ ಪಾಲುದಾರರೊಂದಿಗೆ ಮಾತನಾಡದೆ ಟಿಡಿಪಿ ಮತ್ತು ಜೆಡಿಯು ಜೊತೆಗಿನ ಮೈತ್ರಿ ಬಗ್ಗೆ ಉತ್ತರಿಸುವುದಿಲ್ಲ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ದೆಹಲಿಯ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ "ಸರ್ಕಾರ ರಚನೆಗೆ ಮುಂದಾಗುವಿರಾ?" ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ರಾಹುಲ್ ಗಾಂಧಿ, "ನಮ್ಮದು ಇಂಡಿಯಾ ಮೈತ್ರಿಕೂಟದ ಭಾಗವಾಗಿರುವ ಪಕ್ಷ. ನಮ್ಮ ಪಾಲುದಾರರ ಜೊತೆ ಮಾತನಾಡದೇ ಈ ಪ್ರಶ್ನೆಗೆ ಉತ್ತರಿಸುವುದಿಲ್ಲ. ನಾಳೆ ನಮ್ಮ ಒಕ್ಕೂಟದ ಸಭೆ ಇದೆ. ಅಲ್ಲಿ ಎಲ್ಲರ ಅಭಿಪ್ರಾಯಗಳನ್ನು ಕೇಳಿ ಮುಂದಿನ ನಡೆಯ ಬಗ್ಗೆ ತಿಳಿಸುತ್ತೇವೆ" ಎಂದು ಹೇಳಿದ್ದಾರೆ.

ಈ ಚುನಾವಣೆಯಲ್ಲಿ ನಾವು ಬಿಜೆಪಿ ಮತ್ತು ಎನ್‌ಡಿಎ ಸರ್ಕಾರ ದುರುಪಯೋಗಪಡಿಸಿಕೊಂಡ ಸ್ವತಂತ್ರ ಸಂಸ್ಥೆಗಳ ವಿರುದ್ಧ ಹೋರಾಡಿದ್ದೇವೆ. ನಮ್ಮ ಬ್ಯಾಂಕ್ ಖಾತೆಗಳನ್ನು ದುರುಪಯೋಗ ಪಡಿಸಿಕೊಂಡರು. ನಮ್ಮ ಮೈತ್ರಿಕೂಟದ ಸದಸ್ಯರನ್ನು ಜೈಲಿಗಟ್ಟಿ ತೊಂದರೆ ನೀಡಿದರು. ಆದರೂ, ನಮಗೆ ಜನರ ಮೇಲೆ ನಮಗೆ ನಂಬಿಕೆಯಿತ್ತು. ಜನರು ಅದಕ್ಕೆಲ್ಲ ಈ ಚುನಾವಣೆಯಲ್ಲಿ ತಕ್ಕ ಉತ್ತರ ನೀಡಿದ್ದಾರೆ" ಎಂದಿದ್ದಾರೆ.

ಜನರಿಗೆ ನರೇಂದ್ರ ಮೋದಿಯವರ ಬಗ್ಗೆ ಇರುವ ತಿರಸ್ಕಾರ ಭಾವನೆ ಈ ಚುನಾವಣೆಯಲ್ಲಿ ಹೊರಬಂದಿದೆ. ಇವತ್ತು ನೀವು ಅದಾನಿ ಸ್ಟಾಕ್‌ಗಳನ್ನು ನೋಡಿದ್ದೀರಾ? ಎಲ್ಲವೂ ಬಿದ್ದು ಹೋಗಿದೆ. ಮೋದಿಯಿಲ್ಲದಿದ್ದರೆ ಅವರು ಯಾರೂ ಇಲ್ಲ ಎನ್ನುವುದು ಇಂದು ಸಾಬೀತಾಗಿದೆ" ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ಉತ್ತರಪ್ರದೇಶದ ಜನರು ಅಚ್ಚರಿಯ ಫಲಿತಾಂಶ ನೀಡಿದ್ದಾರೆ. ಭಾರತದ ರಾಜಕಾರಣದ ಗತಿಯನ್ನು ಗಮನಿಸಿ, ಉತ್ತರ ಪ್ರದೇಶವು ಸಂವಿಧಾನದ ರಕ್ಷಣೆ ಮಾಡಿದೆ. ನಿಮಗೆ ವಿಶೇಷ ಧನ್ಯವಾದಗಳು. ಉತ್ತರ ಪ್ರದೇಶದಂತೆಯೇ ಇತರ ಕೆಲವು ರಾಜ್ಯಗಳೂ ಉತ್ತಮ ಫಲಿತಾಂಶ ನೀಡಿವೆ. ಆದರೆ, ಉತ್ತರ ಪ್ರದೇಶದ ಜನರ ನಡೆ ಗಮನಾರ್ಹವಾದುದು" ಎಂದಿದ್ದಾರೆ.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಗೆಲುವು

## ಬಿಜೆಪಿ ಕಾರ್ಯಕರ್ತರಿಂದ ಸಂಭ್ರಮಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ- ಗದಗ ಲೋಕಸಭಾ ಕ್ಷೇತ್ರದಿಂದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಅಭೂತಪೂರ್ವ ಗೆಲುವು ದಾಖಲಿಸುತ್ತಿದ್ದಂತೆ ಅವರ ಅಪಾರ ಅಭಿಮಾನಿಗಳು ನಗರದ ಹುಯಿಲಗೋಳ ನಾರಾಯಣರಾವ ವೃತ್ತ ಸೇರಿದಂತೆ ನಗರದ ವಿವಿಧೆಡೆ ಪಟಾಕಿ ಸಿಡಿಸಿ, ಬಣ್ಣ ಎರಚುತ್ತ ಸಿಹಿ ವಿತರಿಸಿ ಸಂಭ್ರಮಿಸಿದರು.



ನಗರದ ಹುಯಿಲಗೋಳ ನಾರಾಯಣ ವೃತ್ತದಲ್ಲಿ ಅಪಾರ ಸಂಖ್ಯೆಯಲ್ಲಿ ಸೇರಿದ್ದ ಬಿಜೆಪಿ ಕಾರ್ಯಕರ್ತರು, ನರೇಂದ್ರ ಮೋದಿ, ಬಸವರಾಜ್ ಬೊಮ್ಮಾಯಿ, ಶಾಸಕ ಸಿ.ಸಿ.ಪಾಟೀಲ ಹಾಗೂ ಬಿಜೆಪಿ ಪರ ಘೋಷಣೆಗಳನ್ನು ಕೂಗುತ್ತಾ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಮಾತನಾಡಿ, ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಅವರು ಗದಗ- ಹಾವೇರಿ ಲೋಕಸಭಾ ಕ್ಷೇತ್ರದಿಂದ 43 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಅಭೂತಪೂರ್ವ ಗೆಲುವು ಕಂಡಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತವಿದ್ದರೂ ಬಿಜೆಪಿ 19 ಸ್ಥಾನಗಳನ್ನು ಗೆಲ್ಲುವಲ್ಲಿ ಮತದಾರರ ಆಶೀರ್ವಾದ ಮತ್ತು ಕಾರ್ಯಕರ್ತರ ಅಪಾರ ಪರಿಶ್ರಮವಿದೆ. ಬಸವರಾಜ್ ಬೊಮ್ಮಾಯಿ ಅವರ ಅಧಿಕಾರವಧಿಯಲ್ಲಿ ಅಭಿವೃದ್ಧಿ ಕಾರ್ಯಗಳು ಮತ್ತು ಜನರೊಂದಿಗೆ ಬೆರೆತು ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಮತದಾರರ ಮನಗೆದ್ದಿದ್ದಾರೆ ಎಂದರು.

ವಿಜಯೋತ್ಸವದಲ್ಲಿ ಜಗನ್ನಾಥ್ ಬಾಂಡಗೆ, ಎಂ. ಎಂ.ಹಿರೇಮಠ, ಕುಮಾರ ಮಾರನಬಸರಿ, ಶ್ರೀನಿವಾಸ ಹುಬ್ಬಳ್ಳಿ, ನಾಗರಾಜ ತಳವಾರ, ಸಂತೋಷ ಮೇಲಗಿರಿ, ವಿನಾಯಕ ಮಾನ್ವಿ, ಶಿವು ಹಿರೇಮನಿ ಪಾಟೀಲ, ರಾಹುಲ್ ಅರಳಿ ,ಮಂಜುನಾಥ್ ಮುಳಗುಂದ, ಲಕ್ಷ್ಮಣ ದೊಡ್ಡಮನಿ, ವೆಂಕಟೇಶ್ ಹಬೀಬ, ಉಮೇಶ್ ಹಡಪದ, ನಿರ್ಮಲಾ ಕೊಳ್ಳಿ, ಜಯಶ್ರೀ ಉಗಲಾಟದ, ಕಮಲಾಕ್ಷಿ ಗೊಂದಿ, ಚನ್ನಮ್ಮ ಹುಳಕಣ್ಣವರ ಸೇರಿದಂತೆ ಮುಂತಾದವರು ಪಾಲ್ಗೊಂಡಿದ್ದರು.

## ಭ್ರಷ್ಟರನ್ನು ರಕ್ಷಿಸುತ್ತಿರುವ ಸಿಎಂ ರಾಜೀನಾಮೆಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ವಾಲ್ಮೀಕಿ ನಿಗಮದಲ್ಲಿ ನಡೆದ ಬಹುಕೋಟಿ ಹಗರಣದ ನಿಷ್ಪಕ್ಷ ತನಿಖೆಗಾಗಿ ಕೂಡಲೇ ಸಚಿವ ನಾಗೇಂದ್ರ ಅವರ ರಾಜೀನಾಮೆ ಪಡೆಯಬೇಕಿದ್ದ ಸಿದ್ದರಾಮಯ್ಯನವರು ಜಾಣ ಕುರುಡುತನದ ಮೂಲಕ ಬ್ರಷ್ಟಾಚಾರಿಗಳನ್ನು ರಕ್ಷಿಸುತ್ತಿರುವದು ಸಂವಿಧಾನಕ್ಕೆ ಮಾಡುತ್ತಿರುವ ಅಪಚಾರ. ಕೂಡಲೇ ಸಿದ್ದರಾಮಯ್ಯ ಅವರು ಮುಖಮಂತ್ರಿ ಸ್ಥಾನಕ್ಕೆ



ರಾಜೀನಾಮೆ ನೀಡಬೇಕು ಎಂದು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಡಿರುವ ಅವರು, ಹಗರಣದ ಕುರಿತು ಪತ್ರ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ನಿಗಮದ ಮೇಲಾಧಿಕಾರಿಯ ಸಾವಿಗೆ ನ್ಯಾಯ ಒದಗಿಸಿಕೊಡುವ ಬದಲು ಸತ್ಯವನ್ನು ಮುಚ್ಚಿಡುವ ಪ್ರಯತ್ನ ಮಾಡುವ ಮೂಲಕ ಸಿದ್ದರಾಮಯ್ಯನವರು ಇನ್ನು ಎಷ್ಟು ಪ್ರಾಮಾಣಿಕ ನೌಕರರ ಪ್ರಾಣ ತೆಗೆದುಕೊಳ್ಳುತ್ತಾರೋ ಎಂಬ ಆತಂಕ ರಾಜ್ಯದ ಜನತೆಯಲ್ಲಿ ಮೂಡಿದೆ.

75 ಲಕ್ಷ ರ ವಾಚ್ ಕೊಡುಗೆ ಪ್ರಕರಣದಲ್ಲಿ ಸಿಲುಕಿಕೊಂಡಿದ್ದ ಸಿದ್ದರಾಮಯ್ಯ ಅವರು ತಮ್ಮ ಅಧಿಕಾರದುದ್ದಕ್ಕೂ ಭ್ರಷ್ಟರನ್ನ ಪೋಷಿಸುತ್ತಲೇ ಬಂದಿದ್ದಾರೆ. ಇವರಿಗೆ ಮುಖ್ಯಮಂತ್ರಿ ಹುದ್ದೆಯಲ್ಲಿ ಮುಂದುವರೆಯುವ ನೈತಿಕತೆ ಇಲ್ಲ. ಕೂಡಲೇ ರಾಜೀನಾಮೆ ಸಲ್ಲಿಸಿ ತನಿಖೆಗೆ ಸಹಕರಿಸಬೇಕೆಂದು ಎಂದು ಅವರು ಆಗ್ರಹಿಸಿದ್ದಾರೆ.

## 'ಕೈ'ಕೊಟ್ಟ ಗ್ಯಾರಂಟಿ : ಅರಳಿದ ಕಮಲ

▶▶ಮೊದಲನೇ ಪುಟದಿಂದ

ರೋಣ ಮತ್ತು ಶಿರಹಟ್ಟಿ ಮೀಸಲು ಕ್ಷೇತ್ರ ಹೊರತುಪಡಿಸಿ, ಹಾವೇರಿ ಮತ್ತು ಗದಗ ಜಿಲ್ಲೆಯ ಯಾವುದೇ ಕ್ಷೇತ್ರದಲ್ಲಿಯೂ ಕಾಂಗ್ರೆಸ್ಸಿಗೆ ಮುನ್ನಡೆ ದಕ್ಕಿಲ್ಲ.

ಗದಗ ಜಿಲ್ಲೆಯಲ್ಲಿ ಕಾಂಗ್ರೆಸ್‌ಗೆ ಅತಿಯಾದ ಆತ್ಮವಿಶ್ವಾಸವೇ ಮುಳುವಾಯಿತು ಎಂಬ ಅಭಿಪ್ರಾಯಗಳು ವ್ಯಕ್ತವಾಗುತ್ತಿವೆ. ರಾಜ್ಯ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳು ಗದಗ ಜಿಲ್ಲೆಯಲ್ಲಿ ಶೇ. 98ರಷ್ಟು ಫಲಾನುಭವಿಗಳನ್ನು ತಲುಪಿದ್ದು, ಅವು ಮತಗಳಾಗಿ ಪರಿವರ್ತನೆ ಆಗುತ್ತವೆ ಎನ್ನುವ ಲೆಕ್ಕಾಚಾರ ಕಾಂಗ್ರೆಸ್ ನಾಯಕರಲ್ಲಿತ್ತಾದರೂ, ಇದೀಗ ಆ ಲೆಕ್ಕ ತಲೆಕೆಳಗಾಗಿರುವುದು ಕಾಂಗ್ರೆಸ್ ಬೆಂಬಲಿಗರಲ್ಲಿ ನಿರಾಸೆ ಮೂಡಿಸಿದೆ.

ಇನ್ನು, ದಶಕಗಳಿಂದಲೂ ಕಾಂಗ್ರೆಸ್‌ನ ಭದ್ರ ಪಾಳಯವೆಂದೇ ಗುರುತಿಸಿಕೊಂಡಿರುವ ಗದಗ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೆಚ್ಚು ಮತಗಳನ್ನು ಪಡೆಯಲು ಅಭ್ಯರ್ಥಿ ಬೊಮ್ಮಾಯಿ ಬೆಂಬಲಕ್ಕೆ ನಿಂತ ಮಾಜಿ ಸಚಿವ, ನರಗುಂದ ಶಾಸಕ ಸಿ.ಸಿ. ಪಾಟೀಲರ ಪಾತ್ರ ಮಹತ್ತರವಾಗಿದೆ. ಆಂತರಿಕ ಭಿನ್ನಮತದ ಮಧ್ಯೆಯೂ ತಮ್ಮ ಆಪ್ತ ಸ್ನೇಹಿತನ ಗೆಲುವಿಗಾಗಿ ಸಿ.ಸಿ. ಪಾಟೀಲ ಪ್ರಾಮಾಣಿಕ ಪ್ರಯತ್ನ ಮಾಡಿದರು. ಸಿ.ಸಿ. ಪಾಟೀಲ ಬಾಗಲಕೋಟ ಕ್ಷೇತ್ರದ ಉಸ್ತುವಾರಿ ಆಗಿದ್ದರೂ ಹಾವೇರಿ-ಗದಗ ಕ್ಷೇತ್ರವನ್ನು ಕಡೆಗಣಿಸದೆ ಕೆಲಸ ಮಾಡಿದ್ದು ಫಲ ನೀಡಿತು. ಹಾವೇರಿಯಲ್ಲಷ್ಟೇ ಅಲ್ಲದೆ, ಗದಗ ಕ್ಷೇತ್ರಕ್ಕೂ ಸಮನಾಗಿ ಮಹತ್ವ ನೀಡಿ ಪ್ರಚಾರ ನಡೆಸಿದ್ದೂ ಬೊಮ್ಮಾಯಿ ಗೆಲುವಿಗೆ ಕಾರಣವಾಗಿದೆ.

## ಎನ್ವಿರಾನ್ಮೆಂಟ್

ಡೆವಲ್ಮೆಂಟ್ ಇಂಪ್ರೂವ್ಮೆಂಟ್
ಅನ್ನೋ ಹೆಸರಲ್ಲಿ ಹಾಳ್ ಮಾಡಿಬಿಟ್ವಲ್ಲ ಎನ್ವಿರಾನ್ಮೆಂಟ್
ಈಗ್ಲೂ ಬುದ್ಧಿ ಬರದಿದ್ರೆ ನಮ್ಗೆ
ಮುಂದಿನ ಪೀಳಿಗೆ ಬದುಕೋದಾದ್ರು ಹೆಂಗೆ
ಪ್ಲಾಸ್ಟಿಕ್ ಯುಗದಲ್ಲೆಲ್ಲಾ ಕಮರ್ಷಿಯಲ್ಲು
ಫುಡ್ಡು ಸಿಗತಿಲ್ವಲ್ಲಾ ನ್ಯಾಚುರಲ್ಲು
ಎಲ್ಲೆಲ್ಲು ತುಂಬೈತೆ ತುಂಬಾ ಕೆಮಿಕಲ್ಲು

ಊರ್ ತುಂಬಾ ಗಾಡಿ, ಪೊಲ್ಯುಶನ್ ನೋಡಿ
ಪ್ರಾಣಿ, ಪಕ್ಷಿ, ಗಿಡ ನಾಶ ಮಾಡಿ
ನೇಚರ್ ಜೊತೆಗೆ ಬಂಧ ದೂರ ಮಾಡಿ
ಹೆಲ್ದಿ ಲೈಫು ಹೆಂಗೆ ಯೋಚನೆ ಮಾಡಿ

ಬಿಸಿಲಿನ್ ತಾಪಕ್ಕೆ ಸೂರ್ಯನ್ ಬೈಕೊಂಡು
ನೀರೇ ಬರ್ತಿಲ್ಲಂತ ಚಿಂತೆ ಮಾಡ್ಕೊಂಡು
ನಮ್ದೆ ತಪ್ಪಂತ ಭಾಷಣ ಬಿಕ್ಕೊಂಡು
ಮರ್ತು ಬಿಡ್ತಾರಲ್ಲ ಉಂಡು ಮಲ್ಕೊಂಡು

ಸುರಿಯೋ ಮಳೆ ಹರಿಯೋ ಹೊಳೆ
ಬೆಟ್ಟ ಗುಡ್ಡಗಳ ಸುಂದರ ಕಳೆ
ವನಸಿರಿ ಪ್ರಕೃತಿಯ ವರದಾನ
ವನ್ಯಜೀವಿಗಳ ಆಶ್ರಯತಾಣ

ಬುದ್ಧಿ ಇರುವ ನಾವುಗಳೇ
ಪರಿಸರ ಉಳಿಸಿ ಬೆಳೆಸೋಣ
ಮನೆಗೊಂದು ಮರ ಊರಿಗೊಂದು ವನ
ಕಾಡ ಬೆಳೆಸಿ ನಾಡ ಉಳಿಸೋಣ
ಸಮೃದ್ಧ ಜೀವನ ನಡೆಸೋಣ

– ಮಂಜುನಾಥ ಸಜ್ಜನರ

## ನಿತ್ಯ ಯೋಗ ಮಾಡಿ ನಿರೋಗಿಯಾಗಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ನಿತ್ಯವೂ ಯೋಗ ಮಾಡಿದರೆ ರೋಗದಿಂದ ಸಂಪೂರ್ಣ ದೂರವಾಗಿ ನಿರೋಗಿಗಳಾಗಲು ಸಾಧ್ಯ ಎಂದು ಶೋಭಾ ಗುಗ್ಗರಿ ಹೇಳಿದರು.

ಅವರು ಪಟ್ಟಣದ ಬಿ.ಸಿ. ಬಂಗಾರಿ ಪ್ರಾಥಮಿಕ ಶಾಲೆ ಆವರಣದಲ್ಲಿ ಪತಂಜಲಿ ಯೋಗ ಸಮಿತಿಯಿಂದ ಹಮ್ಮಿಕೊಂಡಿದ್ದ ಉಚಿತ ಯೋಗ ತರಬೇತಿ ಶಿಬಿರ ಉದ್ಘಾಟಿಸಿ ಮಾತನಾಡಿ,



ಯೋಗದಲ್ಲಿ ಎಲ್ಲಾ ರೋಗಗಳಿಗೆ 'ಡಿವಾಣ ಹಾಕುವ ಶಕ್ತಿ ಅಡಗಿದ್ದು, ಪ್ರತಿಯೊಬ್ಬರೂ ನಿತ್ಯ ಯೋಗ ಮಾಡಿ ನಿರೋಗಿಗಳಾಗಿ ಎಂದರು.

ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ರತ್ನಮ್ಮ ಬಡಗಣ್ಣವರ, ಸುಧಾ ಚಳ್ಳಮರದ, ರತ್ನಾ ಕಲ್ಲೂರ, ದ್ರಾಕ್ಷಾಯಣಿ ಸಂಬರಗಿ, ಗೀತಾ ಜಾಧಾವ, ಮಧು ಕುರ್ತಕೋಟಿ, ಈಶ್ವರಿ ವಿಶ್ವವಿದ್ಯಾಲಯದ ಶಿವಾನಿ, ಯೋಗ ಶಿಕ್ಷಕ ಪ್ರಕಾಶ ಮದ್ದಿನ ಇದ್ದರು.

## ವಾರ್ಷಿಕ ಸರ್ವ ಸಾಧಾರಣ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಸೋ.ಸ. ಕ್ಷತ್ರಿಯ ತರುಣ ಸಂಘ, ಶ್ರೀ ಜಗದಂಬಾ ದೇವಸ್ಥಾನ-ಬೆಟಗೇರಿ ಇದರ ವಾರ್ಷಿಕ ಸರ್ವ ಸಾಧಾರಣ ಸಭೆಯು ಜೂನ್ 9ರಂದು ಮುಂಜಾನೆ 11 ಗಂಟೆಗೆ ಅಂಬಾಭವಾನಿ ದೇವಸ್ಥಾನದಲ್ಲಿ ಶ್ಯಾಮ್ ಎನ್.ಮಿಸ್ಕಿನ್ ಅಧ್ಯಕ್ಷತೆಯಲ್ಲಿ ಜರುಗಲಿದೆ.

ತರುಣ ಸಂಘದ ಎಲ್ಲ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಸಭೆಯಲ್ಲಿ ಭಾಗವಹಿಸಬೇಕು. ಈ ಸಭೆಯಲ್ಲಿ 2023-24ನೇ ಸಾಲಿನ ಲೆಕ್ಕ ಪತ್ರಗಳ ಪರಿಶೀಲನೆ ಹಾಗೂ ಮುಂದಿನ ಅವಧಿಗೆ ಪದಾಧಿಕಾರಿಗಳ ಆಯ್ಕೆ ಜರುಗಲಿದೆ ಎಂದು ಸಂಘದ ಗೌರವ ಕಾರ್ಯದರ್ಶಿ ಶ್ರೀಕಾಂತ ಜೆ.ಕಬಾಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರು ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಲ್ಲಿ ವಿನಂತಿಸುವುದೆನೆಂದರೆ ಜೂನ್ 5 ರಂದು ಗದಗ-ಬೆಟಗೇರಿ ಅವಳಿನಗರಕ್ಕೆ ಕುಡಿಯುವ ನೀರು ಪೂರೈಕೆ ಮಾಡುವ ಮುಖ್ಯ ಕೊಳವೆ ಮಾರ್ಗಗಳಾದ ಅಡವಿಸೋಮಾಪೂರದ ಗ್ರಾಮದ ಹತ್ತಿರ ಇರುವ ಹಳ್ಳದಲ್ಲಿ ಇರುವ ಮುಖ್ಯ ಕೊಳವೆ ಮಾರ್ಗದಲ್ಲಿ ಹಾಗೂ ಚಿಕ್ಕಟ್ಟಿ ಶಾಲೆಯಿಂದ ಮುಂಚಿತವಾಗಿ ಗದಗ ಭಾಗದ ಕಡೆಗೆ ಇರುವ ಹಳ್ಳದ ಹತ್ತಿರ ಇರುವ ಮುಖ್ಯ ಕೊಳವೆ ಮಾರ್ಗದಲ್ಲಿ ದುರಸ್ತಿ ಕಾಮಗಾರಿ ಭರದಿಂದ ಸಾಗಿದ್ದು, ಮಳೆಯ ಕಾರಣದಿಂದ ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿದೆ.

ಇದರಿಂದಾಗಿ ಅವಳಿ ನಗರಕ್ಕೆ ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವುದರಿಂದ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾರಣಾಸಿಯಿಂದ ಗೆಲುವು ಸಾಧಿಸಿದ ನರೇಂದ್ರ ಮೋದಿ: ಗೆಲುವಿನ ಅಂತರದಲ್ಲಿ ಭಾರಿ ಇಳಿಕೆ



■ವಿಜಯಸಾಕ್ಷಿ ಸುದ್ದಿ, ವಾರಣಾಸಿ

ನರೇಂದ್ರ ಮೋದಿ 2019ರ ಚುನಾವಣೆಯಲ್ಲಿ 6,74,664 ಮತಗಳನ್ನು ಪಡೆದು ಸಮಾಜವಾದಿ ಪಕ್ಷದ ಅಭ್ಯರ್ಥಿಯ ವಿರುದ್ಧ 4,79,505 ಮತಗಳ ಅಂತರದಿಂದ ಜಯಗಳಿಸಿದ್ದರು. 2014ರಲ್ಲಿ ಮೊದಲ ಬಾರಿಗೆ ಸ್ಪರ್ಧಿಸಿದ್ದ ಚುನಾವಣೆಯಲ್ಲಿ 5,81,022 ಮತಗಳನ್ನು ಪಡೆದು 3,71, 784 ಮತಗಳ ಅಂತರದಲ್ಲಿ ಗೆಲುವು ದಾಖಲಿಸಿದ್ದರು.

ಈ ಬಾರಿ ಒಂದೂವರೆ ಲಕ್ಷ ಮತಗಳ ಅಂತರದಿಂದ ಮಾತ್ರ ಗೆಲುವು ಗಳಿಸಿರುವುದು ಮೋದಿ ಜನಪ್ರಿಯತೆ ಕಡಿಮೆಯಾಗಿರುವ ಸೂಚಕವಾಗಿದೆ. ಅದಲ್ಲದೆ ಮೊದಲ ಆರಂಭಿಕ ಹಂತದ ಕೆಲವು ಸುತ್ತುಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮುನ್ನಡೆ ಸಾಧಿಸಿದ್ದರು.

ಬಿಜೆಪಿ ಉತ್ತರ ಪ್ರದೇಶದಲ್ಲಿ 80 ಸದಸ್ಯ ಸಂಖ್ಯೆಯಲ್ಲಿ ಭಾರಿ ಹಿನ್ನಡೆಯಲ್ಲಿದೆ.2019ರಲ್ಲಿ 62 ಹಾಗೂ 2014ರಲ್ಲಿ 71 ಸ್ಥಾನಗಳನ್ನು ಪಡೆದಿತ್ತು. ಈ ಬಾರಿ 35 ಕ್ಷೇತ್ರಗಳಲ್ಲಿ ಮಾತ್ರ ಮುನ್ನಡೆ ಕಾಯ್ದುಕೊಂಡಿದೆ. ಕೇಂದ್ರ ಸಚಿವೆ ಸ್ಮೃತಿ ಇರಾನಿ ಸೇರಿದಂತೆ ಹಲವರು ಪರಾಭವಗೊಂಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ಪ್ರದೇಶದ ವಾರಣಾಸಿಯಿಂದ ಮೂರನೇ ಬಾರಿ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಮೋದಿ ಅವರು ಕಾಂಗ್ರೆಸ್‌ನ ಅಜಯ್ ರಾಯ್ ಅವರನ್ನು 1,52,513 ಮತಗಳ ಅಂತರದಿಂದ ಸೋಲಿಸಿದ್ದಾರೆ.

## ಲಕ್ನೋ| ಮತ ಎಣಿಕೆ ಕೇಂದ್ರದ ಹೊರಗೆ ಬಿಜೆಪಿ, ಎಸ್‌ಪಿ ಕಾರ್ಯಕರ್ತರ ನಡುವೆ ಘರ್ಷಣೆ



■ವಿಜಯಸಾಕ್ಷಿ ಸುದ್ದಿ, ಲಕ್ನೋ

ಉತ್ತರ ಪ್ರದೇಶದ ಲಕ್ನೋದಲ್ಲಿ ಆಡಳಿತಾರೂಢ ಬಿಜೆಪಿ ಮತ್ತು ಸಮಾಜವಾದಿ ಪಕ್ಷದ (ಎಸ್‌ಪಿ) ಕಾರ್ಯಕರ್ತರ ನಡುವೆ ಮಂಗಳವಾರ ಘರ್ಷಣೆ ಉಂಟಾಗಿದ್ದು ಹಲವರು ತೀವ್ರ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಲೋಕಸಭೆ ಚುನಾವಣೆಯ ಮತ ಎಣಿಕೆ ನಡೆಯುತ್ತಿರುವ ಲಕ್ನೋದ ರಮಾಬಾಯಿ ಅಂಬೇಡ್ಕರ್ ಬೂತ್‌ನ ಹೊರಗೆ ಮಾರಾಮಾರಿ ನಡೆದಿದೆ. ಘರ್ಷಣೆಯ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದ್ದು, ಸುಡು ಬಿಸಿಲಿನಲ್ಲಿ ಎರಡೂ ಪಕ್ಷಗಳ ಕಾರ್ಯಕರ್ತರ ನಡುವೆ ಮತ ಎಣಿಕೆ ಬೂತ್‌ನ ಹೊರಗೆ ಘರ್ಷಣೆ ನಡೆದಿರುವುದು ಕಂಡುಬಂದಿದೆ.

## NMMS ಶಿಷ್ಯ ವೇತನಕ್ಕೆ ಆಯ್ಕೆ





■ವಿಜಯಸಾಕ್ಷಿ ಸುದ್ದಿ, ಗದಗ

DSERT ಬೆಂಗಳೂರು ವತಿಯಿಂದ ನಡೆದ NMMS ಪರೀಕ್ಷೆಯಲ್ಲಿ ಹುಲಕೋಟಿಯ ಕೆ.ಎಚ್. ಪಾಟೀಲ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶಿಷ್ಯ ವೇತನಕ್ಕೆ ಅರ್ಹತೆ ಪಡೆದುಕೊಂಡಿದ್ದಾರೆ.

ಗದಗ ಗ್ರಾಮೀಣ ವಲಯದಲ್ಲಿ ಒಟ್ಟು 10 ವಿದ್ಯಾರ್ಥಿಗಳು NMMS ಶಿಷ್ಯ ವೇತನಕ್ಕೆ ಅರ್ಹರಾಗಿದ್ದು, ಸದರಿ 10 ವಿದ್ಯಾರ್ಥಿಗಳಲ್ಲಿ ಕೆ.ಎಚ್. ಪಾಟೀಲ ಬಾಲಕಿಯರ ಸರ್ಕಾರಿ ಪ್ರೌಢಶಾಲೆ ಹುಲಕೋಟಿಯ ಮೂವರು ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದಾರೆ. ಸುನೀತಾ ಹಾಲಣ್ಣವರ ಗದಗ ತಾಲೂಕಿನ ಗ್ರಾಮೀಣ ವಲಯಕ್ಕೆ ಪ್ರಥಮ, ಸ್ಮಿತಾ ಹಿರೇಮಠ ದ್ವಿತೀಯ, ಸೃಷ್ಟಿ ದಿಂಡೂರ ಐದನೇ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

NMMS ಶಿಷ್ಯ ವೇತನಕ್ಕೆ ಅರ್ಹರಾದ ಮೂವರು ವಿದ್ಯಾರ್ಥಿನಿಯರಿಗೆ ಹಾಗೂ NMMS ಪರೀಕ್ಷೆಗೆ ತರಬೇತಿ ನೀಡಿದ ಗಣಿತ ವಿಷಯದ ಶಿಕ್ಷಕರಾದ ಯೋಗಿಶ ಕುಮಾರ ಅವರಿಗೆ ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರು, ಸರ್ವ ಸದಸ್ಯರು, ಮುಖ್ಯೋಪಾಧ್ಯಾಯರು ಹಾಗೂ ಸರ್ವ ಸಿಬ್ಬಂದಿ ವರ್ಗದವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

### ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ವಿಜಯೋತ್ಸವ ಆಚರಿಸಿದ ಕಾರ್ಯಕರ್ತರು

# ಬೊಮ್ಮಾಯಿ ಗೆಲುವಿನಿಂದ ಹೊಸ ಹುರುಪು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಗೆಲುವು ಸಾಧಿಸುತ್ತಿದ್ದಂತೆಯೇ ಪಟ್ಟಣ ಸೇರಿ ತಾಲೂಕಿನಾದ್ಯಂತ ಕಾರ್ಯಕರ್ತರು ಪಟಾಕಿ ಸಿಡಿಸಿ, ಬಣ್ಣ ಎರಚಿ, ಸಿಹಿ ಹಂಚಿ ಸಂಭ್ರಮಿಸಿದರು.



ಶಾಸಕ ಡಾ. ಚಂದ್ರು ಲಮಾಣಿ ನೇತೃತ್ವದಲ್ಲಿ ವಿಜಯೋತ್ಸವ ಆಚರಿಸಿದ ಕಾರ್ಯಕರ್ತರು, ಪಟ್ಟಣದ ಸೋಮೇಶ್ವರ ದೇವಸ್ಥಾನ, ಆಂಜನೇಯ ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸಿದರು. ಈ ವೇಳೆ ಮಾತನಾಡಿದ ಶಾಸಕ



ಡಾ. ಚಂದ್ರು ಲಮಾಣಿ, ನಿರೀಕ್ಷೆಯಂತೆ ಹಾವೇರಿ ಲೋಕಸಭಾ ಕ್ಷೇತ್ರದಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಗೆಲುವು ಸಾಧಿಸಿದ್ದಾರೆ. ದೇಶದಲ್ಲಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ ಜನಪರ ಯೋಜನೆಗಳನ್ನು ಮೆಚ್ಚಿ ಮತ್ತೆ ಜನತೆ ಆಶೀರ್ವಾದ ಮಾಡಿದ್ದಾರೆ ಎಂದರು.

ಯಾವುದೇ ಸಮಸ್ಯೆಯಿಲ್ಲದೇ ಮತ್ತೆ ನರೇಂದ್ರ ಮೋದಿ ಪ್ರಧಾನಮಂತ್ರಿಯಾಗಲಿದ್ದು, ಬಸವರಾಜ ಬೊಮ್ಮಾಯಿ ಕೇಂದ್ರ ಸರ್ಕಾರದಲ್ಲಿ ಮಂತ್ರಿಯಾಗಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲಿದ್ದಾರೆ. ಅವರ ಗೆಲುವು ಕ್ಷೇತ್ರದ ಕಾರ್ಯಕರ್ತರಲ್ಲಿ ಹುಮ್ಮಸ್ಸು ಮೂಡಿಸಿದೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಈ ವೇಳೆ ಶಿರಹಟ್ಟಿ ಮಂಡಲದ ಬಿಜೆಪಿ ಅಧ್ಯಕ್ಷ ಸುನಿಲ ಮಹಾಂತ ಶೆಟ್ಟರ, ನಗರ ಅಧ್ಯಕ್ಷ ನವೀನ ಬೆಳ್ಳಟ್ಟಿ, ಎಂ.ಆರ್. ಪಾಟೀಲ್, ವಿಜಯಕುಮಾರ ಹತ್ತಿಕಾಳ, ನೀಲಪ್ಪ ಹತ್ತಿ, ಸೋಮೇಶ ಉಪನಾಳ, ಪೂರ್ಣಾಜಿ ಕರಾಟೆ, ಅನಿಲ ಮುಳುಗುಂದ, ಗಂಗಾಧರ ಮೆಣಸಿನಕಾಯಿ, ಬಸವರಾಜ ಚಕ್ರಸಾಲಿ, ಶಿವಯೋಗಿ ಅಂಕಲಕೋಟಿ, ಬಸವರಾಜ ಮಡಿವಾಳರ, ವಿಜಯ ಕುಂಬಾರ, ರಮೇಶ ಹಾಳದೋಟದ, ದುಂಡೇಶ ಕೋಟಗಿ, ಈರಣ್ಣ ಪೂಜಾರ, ಪ್ರಕಾಶ ಮಾದನೂರ, ಟಾಕಪ್ಪ ಸಾತಪುತೆ, ಪರಸಣ್ಣ ಇಮ್ಮಡಿ, ಜಗದೀಶಗೌಡ ಪಾಟೀಲ, ಹಾಲಪ್ಪ ಸೂರಣಗಿ, ರವಿಕುಮಾರ ಕೋರಿ, ಮಂಜುನಾಥ ರಾಮಗೇರಿ ಸೇರಿ ಅನೇಕ ಕಾರ್ಯಕರ್ತರಿದ್ದರು.

## ಬಿಜೆಪಿ ಕಾರ್ಯಕರ್ತರ ಸಂಭ್ರಮಾಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಬಾಗಲಕೋಟ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸುತ್ತಿದ್ದಂತೆ ಅಭ್ಯರ್ಥಿ ಪಿ.ಸಿ. ಗದ್ದಿಗೌಡ್ರ ಇಲ್ಲಿಯ ಬಿಜೆಪಿ ಕಾರ್ಯಕರ್ತರು ಸಂಭ್ರಮವನ್ನಾಚರಿಸಿದರು.

ಪರಸ್ಪರ ಸಿಹಿ ತಿನ್ನಿಸಿ, ಬಣ್ಣ ಹಾಕಿ ಸಂತಸ ವ್ಯಕ್ತಪಡಿಸಿದ ಕಾರ್ಯಕರ್ತರು ಪಟಾಕಿ ಸಿಡಿಸಿ ಕುಣಿದು ಕುಪ್ಪಳಿಸಿದರು. ನಂತರ ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆಸಿ ಘೋಷಣೆಗಳನ್ನು ಕೂಗಿದರು. ಈ ಸಂದರ್ಭದಲ್ಲಿ ಬಿಜೆಪಿ ಪಕ್ಷದ ವಕ್ತಾರ ದತ್ತಣ್ಣ ಜೋಶಿ, ಮುಖಂಡರಾದ ಅಶೋಕ ಬೂದಿಹಾಳ, ಸಿದ್ದು ಮುಳಗುಂದ, ಪ್ರಕಾಶ ಅರಹುಣಶಿ, ಬಸವರಾಜ ಮುಳ್ಳಾಳ, ಮರಿಯಪ್ಪ ವಡ್ಡರ, ಅಂಬರೀಶ ಕವಲೂರ, ಚನ್ನಪ್ಪ ಹುಬ್ಬಳ್ಳಿ, ಬಸವರಾಜ ಕವಲೂರು, ನಾಗಪ್ಪ ಕುಂಬಾರ, ವೀರಭದ್ರಪ್ಪ ಕುಂಬಾರ, ಮಹಾಂತೇಶ ಗುರಿಕಾರ ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.

## ಕುಸ್ತಿ ಕ್ರೀಡಾಪಟುಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಜೂ. 22 ರಿಂದ 30-06-2024 ರವರೆಗೆ ಐ.ಜಿ. ಸ್ಟೇಡಿಯಂ, ನವದೆಹಲಿಯಲ್ಲಿ ನಡೆಯಲಿರುವ ಏಷಿಯನ್ ಕುಸ್ತಿ ಚಾಂಪಿಯನ್ ಶಿಪ್‌ಗೆ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಲು ಗದಗ ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯದ ಕುಸ್ತಿ ಕ್ರೀಡಾಪಟುಗಳಾದ ಕು. ವೈಷ್ಣವಿ ಇಮ್ಮಡಿಯವರ 46 ಕೆಜಿ ವಿಭಾಗದಲ್ಲಿ ಮತ್ತು ರಾಧಿಕಾ ತೊಂಡಿಹಾಳ 57 ಕೆಜಿ ವಿಭಾಗದಲ್ಲಿ ಆಯ್ಕೆಯಾಗಿ ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಆಯ್ಕೆಯಾದ ಕುಸ್ತಿ ಕ್ರೀಡಾಪಟುಗಳಿಗೆ ಹಾಗೂ ಕುಸ್ತಿ ತರಬೇತುದಾರರಾದ ವಿನಾಯಕ ಯಂಕಂಚಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಐ ಗೋಗೇರಿ ಅಭಿನಂದನೆ ಸಲ್ಲಿಸಿದ್ದಾರೆ.

## ಅರುಣೋದಯ ಶಾಲೆಯಲ್ಲಿ ಪ್ರಾರಂಭೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಬೇಸಿಗೆ ರಜೆಯ ಬಳಿಕ ಗದುಗಿನ ಸೇವಾ ಭಾರತಿ ಟ್ರಸ್ಟ್‌ನ ಅರುಣೋದಯ ವಿಶೇಷ ಮಕ್ಕಳ ಶಾಲೆಯ ವಿಶೇಷ ಅಗತ್ಯವುಳ್ಳ ಮಕ್ಕಳು ಶಾಲಾ ಪ್ರಾರಂಭೋತ್ಸವಕ್ಕೆ ಉತ್ಸಾಹದೊಂದಿಗೆ ಆಗಮಿಸಿದರು.

ಶಾಲಾ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ, ಕಾರ್ಯದರ್ಶಿ ಜಯರಾಜ ಮುಳಗುಂದ, ಸದಸ್ಯರಾದ ಡಾ. ಉಮೇಶ ಹಾದಿ ಅವರು ಮನೆಯಿಂದ ಶಾಲೆಗೆ ಬಂದಿಳಿದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಗುಲಾಬಿ ಹೂವು ಕೊಡುವ ಮೂಲಕ ಶಾಲೆಗೆ ಬರಮಾಡಿಕೊಂಡರು.

ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಿದ ಶಾಲಾ ಆಡಳಿತ ಮಂಡಳಿಯ ಪದಾಧಿಕಾರಿಗಳು ಮಕ್ಕಳಿಗೆ ಶುಭ ಹಾರೈಸಿ ವಿಶೇಷ ಅಗತ್ಯವುಳ್ಳ ಈ ಮಕ್ಕಳು ಮಾನಸಿಕವಾಗಿ ಸದೃಢವಾಗಿ ಎಲ್ಲ ಮಕ್ಕಳಂತೆ ಸಹಜ ಜೀವನ ನಡೆಸುವಂತಾಗಲಿ, ಮಕ್ಕಳ ಬುದ್ಧಿಮಟ್ಟ,ಜ್ಞಾನ ಕೌಶಲ್ಯ ವೃದ್ಧಿಯಾಗಿ ಉತ್ತಮ ಪ್ರಜೆಗಳಾಗಿ ಬಾಳಲಿ ಎಂದರು.

ಶಾಲಾ ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ, ಶಿಕ್ಷಕ ಶಿಕ್ಷಕಿಯರಲ್ಲದೆ, ಪಾಲಕ ಪೋಷಕರು, ಆಟೋ ಚಾಲಕರು ಸಮಾರಂಭದಲ್ಲಿ ಉಪಸ್ಥಿತರಿದ್ದರು.



ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಯುವಕ ಮಲ್ಲು ನವಲಗುಂದ ಲೋಕಸಭಾ ಕ್ಷೇತ್ರದ ಫಲಿತಾಂಶದ ದಿನ ಬೃಹತ್ ಗಾಳಿಪಟ ಸಿದ್ಧಪಡಿಸಿ ಅದಕ್ಕೆ ಬಿಜೆಪಿ ಪಕ್ಷದ ಬಾವುಟ ಕಟ್ಟಿ ಮುಗಿಲೆತ್ತರಕ್ಕೆ ಹಾರಿಸಿ ಸಂಭ್ರಮಿಸಿದರು.

### ಅಂತರ್ ಮಹಾವಿದ್ಯಾಲಯಗಳ ವಾರ್ಷಿಕ ವಿಶೇಷ ಎನ್‌ಎಸ್‌ಎಸ್ ಶಿಬಿರ

# ಯುವಕರ ಅಭ್ಯುದಯಕ್ಕೆ ಯೋಗಾಭ್ಯಾಸ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಶಕ್ತಿ ದೇಶದ ಶಕ್ತಿ, ಯುವಕರು ದೇಶದ ಬೆನ್ನೆಲುಬು, ಯುವಕರು ರಾಷ್ಟ್ರ ಪ್ರಗತಿಯ ಆಧಾರ ಸ್ತಂಭಗಳು ಮುಂತಾಗಿ ಯುವಕರ ಹಿರಿಮೆ, ಗರಿಮೆಗಳನ್ನು ನಾವೆಲ್ಲರೂ ಕೊಂಡಾಡುತ್ತೇವೆ. ಆದರೆ ಪ್ರಸ್ತುತ ಇಂದಿನ ಯುವಶಕ್ತಿ ಎತ್ತ ಸಾಗಿದೆ? ಇಂದು ಯುವಕರ ಮನಸ್ಸು ಅವರ ಹತೋಟಿಯಲ್ಲಿಲ್ಲದಿರುವದಕ್ಕಾಗಿ ಅವರು ದುಶ್ಚಟ, ದುರಾಭ್ಯಾಸ, ದುರ್ನಡತೆ, ದುರಾಚಾರಗಳತ್ತ ಸಾಗುತ್ತಿದ್ದಾರೆ. ಯುವಕರ ಚಂಚಲ ಮನಸ್ಸನ್ನು ನಿಯಂತ್ರಿಸಲು ಯೋಗಾಭ್ಯಾಸದಲ್ಲಿನ ಆಸನ, ಪ್ರಾಣಾಯಾಮ, ಧ್ಯಾನಗಳು ಸಾಧನಗಳಾಗಿವೆ ಎಂದು ಡಾ. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಪಿ. ಗೌಳಿಯವರ ಅಭಿಮತವಾಗಿದೆ.

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ, ರಾಷ್ಟ್ರೀಯ ಸೇವಾ ಯೋಜನೆ ಕೋಶ, ಕ.ವಿ.ವಿ. ಸ್ನಾತಕೋತ್ತರ ಅಧ್ಯಯನ ಕೇಂದ್ರ, ಡಾ. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯ, ಜೆ.ಪಿ. ಶಿಕ್ಷಣ ಮಹಾವಿದ್ಯಾಲಯ, ಪಿ.ಪಿ.ಜಿ. ಶಿಕ್ಷಣ ಮಹಾವಿದ್ಯಾಲಯ, ಸರಕಾರಿ ಪ್ರಥಮದರ್ಜೆ ಕಾಲೇಜು ಗದಗ ಇವರುಗಳ ಸಹಯೋಗದಲ್ಲಿ ಕ.ವಿ.ವಿ. ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ನಡೆದಿರುವ ಅಂತರ್ ಮಹಾವಿದ್ಯಾಲಯಗಳ ವಾರ್ಷಿಕ ವಿಶೇಷ ಎನ್‌ಎಸ್‌ಎಸ್ ಶಿಬಿರದ ಅಂಗವಾಗಿ ನಡೆಸಿದ ಯೋಗ ತರಬೇತಿ ವರ್ಗಗಳ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ವೇದಿಕೆಯಲ್ಲಿ ಎಂ.ಎಂ. ನದಾಫ್, ಜಿ.ಬಿ. ಹೂಗಾರ, ಟಿ.ಎಫ್. ನದಾಫ್, ಚೇತನ ಚುಂಚಾ, ಪ್ರತಿಭಾ ಜೋಗಿನ, ಮೇಘಾ ಬೆಳಧಡಿ ಉಪಸ್ಥಿತರಿದ್ದು ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಬಿರಾರ್ಥಿಗಳಾದ ಭಾಸ್ಕರ ಜೋಶಿ, ಚಂದಪ್ಪ ಮಡಿಕೇರಿ, ಭಾರತಿ ಕೊಲ್ಲೂರ, ಪವಿತ್ರಾ ಹುಬ್ಬಳ್ಳಿ ಇವರು ಎನ್‌ಎಸ್‌ಎಸ್ ಶಿಬಿರದಲ್ಲಿನ ಯೋಗ ತರಬೇತಿ ವರ್ಗದ ಕುರಿತು ತಮ್ಮ ಅನಿಸಿಕೆಗಳನ್ನು ತಿಳಿಸಿದರು.

ಪಿ.ಪಿ.ಜಿ. ಶಿಕ್ಷಣ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಡಿ.ಎಸ್. ಶಿಗ್ಲಿ ಮಾತನಾಡಿ, ಈ ಶಿಬಿರದಲ್ಲಿ ಕಲಿತ ಉತ್ತಮ ಗುಣಾಂಶಗಳನ್ನು ಸ್ವಯಂ ಸೇವಕರಾಗಿ ಇನ್ನಿತರರಿಗೂ ತಿಳಿಸಬೇಕು ಮತ್ತು ಸಮಾಜ ಸೇವೆಗೆ ತಮ್ಮನ್ನು ಸಮರ್ಪಿಸಿಕೊಳ್ಳಬೇಕು. ಜೊತೆಗೆ ರಾಷ್ಟ್ರ ಪ್ರಗತಿಗಾಗಿ ಶ್ರಮಿಸಬೇಕೆಂದು ಶಿಬಿರಾರ್ಥಿಗಳಿಗೆ ತಿಳಿಸಿದರು.

ಶಿಬಿರಾರ್ಥಿಗಳಿಗೆ ಯೋಗ ತರಬೇತಿ ನೀಡಿದ ಬಸವಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮತ್ತು ಸಹಾಯಕರಾಗಿ ಸೇವೆ ಸಲ್ಲಿಸಿದ ಚೇತನ ಚುಂಚಾ ಇವರನ್ನು ಗೌರವಿಸಲಾಯಿತು. ಪ್ರಾರಂಭದಲ್ಲಿ ವಿರೇಶ ಹೂಗಾರ ಪ್ರಾರ್ಥಿಸಿದರು. ರಂಗನಾಥ ಪುಡಚಂಚೆ ಸ್ವಾಗತಿಸಿದರು. ರಕ್ಷಿತಾ ಚಿಂತಾ ಕಾರ್ಯಕ್ರಮ ನಿರೂಪಿಸಿದರು. ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜನಾಧಿಕಾರಿ ಡಾ. ಕಸ್ತೂರಿ ದಳವಾಯಿ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka